ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 182 RNI Number : KNKAN/25/A2770 11-07-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :182 ರಾಯಚೂರು 11-07-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಜನಾರ್ದನ ರೆಡ್ಡಿ ಒಡೆತನದ 14 ಸಾವಿರ ಎಕರೆ ಸ್ವಾಧೀನಪಡಿಸಿಕೊಂಡ ಆಂಧ್ರ ಸರ್ಕಾರ


ಕಡಪ(ಆಂಧ್ರ ಪ್ರದೇಶ),ಜ.10-

ಮಾಜಿ ಸಚಿವ ಜನಾರ್ದನ ರೆಡ್ಡಿ ಒಡೆತನದ ಬ್ರಾಹ್ಮಣಿ ಸ್ಟೀಲ್ಸ್ ಗೆ ಹಂಚಿಕೆ ಮಾಡಲಾಗಿದ್ದ ಸುಮಾರು 14 ಸಾವಿರ ಎಕರೆ ಭೂಮಿಯನ್ನು 18 ವರ್ಷಗಳ ಕಾನೂನು ಹೋರಾಟದ ನಂತರ ಸರ್ಕಾರ ಸ್ವಾಧೀನಪಡಿಸಿಕೊಂಡಿದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ವೈಎಸ್ಆರ್ ಕಡಪ ಜಿಲ್ಲೆಯ ಜಮ್ಮಲಮಡುಗು ಮಂಡಲದ ಅಂಬಾವರಂನಲ್ಲಿ ಮಂಜೂರು ಮಾಡಲಾಗಿದ್ದ 14 ಸಾವಿರ ಎಕರೆ ಭೂಮಿಯನ್ನು ಉದ್ದೇಶಿತ ಕಾರ್ಯಕ್ಕೆ ಬಳಸದ ಕಾರಣ ಕಂದಾಯ ಅಧಿಕಾರಿಗಳು ಸ್ವಾಧೀನಪಡಿಸಿಕೊಂಡಿದ್ದಾರೆ. ಈ ಭೂಮಿಯ ಪ್ರಸ್ತುತ ಮೌಲ್ಯ ಸುಮಾರು 5 ಸಾವಿರ ಕೋಟಿ ರೂಪಾಯಿ ಎಂದು ಅಧಿಕಾರಿಗಳು ಅಂದಾಜಿಸಿದ್ದಾರೆ.

ಗುರುವಾರ ರಾತ್ರಿ ಜಿಲ್ಲಾಧಿಕಾರಿ ಚೆರುಕುರಿ ಶ್ರೀಧರ್ ಅವರು ಹೊರಡಿಸಿದ ಆದೇಶದ ನಂತರ ಸ್ವಾಧೀನ ಪ್ರಕ್ರಿಯೆಯು ಮುಕ್ತಾಯಗೊಂಡಿತು. ಇದು ಭವಿಷ್ಯದ ಕೈಗಾರಿಕಾ ಅಗತ್ಯಗಳಿಗಾಗಿ ಈ ಭೂಮಿಯನ್ನು ಬಳಸಲು ದಾರಿ ಮಾಡಿಕೊಟ್ಟಿತು.

2011ರಲ್ಲಿ ಈ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಂದಿನ ಸರ್ಕಾರ ಆದೇಶ ಹೊರಡಿಸಿದ್ದರೂ, ಸ್ವಾಧೀನ ಪ್ರಕ್ರಿಯೆ ನಡೆಯಲಿಲ್ಲ. ನಂತರ



ಜಿಲ್ಲಾಧಿಕಾರಿ ಕಾನೂನು ವಿವಾದಗಳನ್ನು ಪರಿಹರಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಂಡು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಜಮ್ಮಲಮಡುಗು ಪ್ರದೇಶದಲ್ಲಿ ಮೆಗಾ ಸ್ಟೀಲ್ ಘಟಕ ಸ್ಥಾಪಿಸಲು ಈ ಭೂಮಿಯನ್ನು ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಒಡೆತನದ ಬ್ರಾಹ್ಮಣಿ ಸ್ಟೀಲ್ಸ್ ಗೆ 2007 ರಲ್ಲಿ ಆಂಧ್ರ ಸರ್ಕಾರ ಮಂಜೂರು ಮಾಡಿತ್ತು. ಸ್ಟೀಲ್ ಪ್ಲಾಂಟ್‌ಗೆ 10,700 ಎಕರೆ ಮೀಸಲಿಟ್ಟದ್ದರೆ, 3,115 ಎಕರೆಗಳನ್ನು ಹೊಸ ವಿಮಾನ ನಿಲ್ದಾಣ ನಿರ್ಮಿಸಲು ಉದ್ದೇಶಿಸಲಾಗಿತ್ತು. ಆದರೆ, ಅಂದಿನ ಸಿಎಂ ವೈ.ಎಸ್. ರಾಜಶೇಖರ ರೆಡ್ಡಿ ಅವರ ಹಠಾತ್ ನಿಧನ ಮತ್ತು ಕರ್ನಾಟಕದಲ್ಲಿ ಅಕ್ರಮ ಗಣಿಗಾರಿಕೆ ಪ್ರಕರಣಗಳು, ಕಾನೂನು ವಿವಾದಗಳು ಮತ್ತು ಸರ್ಕಾರಿ ನಿರ್ಧಾರಗಳಲ್ಲಿನ ಬದಲಾವಣೆಗಳಿಂದಾಗಿ ಯೋಜನೆಯು ಸ್ಥಗಿತಗೊಂಡಿತು.

2008ರಲ್ಲಿ ಆಗಿನ ಸರ್ಕಾರವು ಬ್ರಾಹ್ಮಣಿ ಇಂಡಸ್ಟ್ರೀಸ್ ವಾಣಿಜ್ಯ ವಿಮಾನ ನಿಲ್ದಾಣ, ಫ್ಲೈಯಿಂಗ್ ಅಕಾಡೆಮಿ ಮತ್ತು ವಾಯುಯಾನ ಸಂಬಂಧಿತ ಕೈಗಾರಿಕೆಗಳ ಸ್ಥಾಪನೆಗಾಗಿ ಎಕರೆಗೆ 25 ಸಾವಿರ ರೂ.ಗಳಂತೆ 3,115.64 ಎಕರೆಗಳನ್ನು ಮಂಜೂರು ಮಾಡಿತ್ತು. ಭೂಮಿಯನ್ನು ಮಂಜೂರು ಮಾಡಲಾಗಿದ್ದರೂ, ಯಾವುದೇ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗಿಲ್ಲ. ಪ್ರಸ್ತುತ, ಸಂಪೂರ್ಣ ಭೂಮಿ ಬಳಕೆಯಾಗದೇ ಉಳಿದಿದೆ.

ಸಂಸ್ಥೆ ಉದ್ದೇಶಿತ ಕಾರ್ಯಕ್ಕೆ ಭೂಮಿ ಬಳಸದ ಕಾರಣ, ನಿಯಮಗಳ ಪ್ರಕಾರ ಮಂಜೂರಾತಿಯನ್ನು ರದ್ದುಗೊಳಿಸಿ ಸರ್ಕಾರದಿಂದ ಸ್ವಾಧೀನಪಡಿಸಿಕೊಳ್ಳಲು ನಿರ್ಧರಿಸಲಾಯಿತು. ಜಿಲ್ಲಾಧಿಕಾರಿಗಳು ಜಮ್ಮಲಮಡುಗು ತಹಶೀಲ್ದಾರ್ ಅವರಿಗೆ 48 ಗಂಟೆಗಳೊಳಗೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವಂತೆ ಸೂಚಿಸಿದ್ದರು. ವೆಬ್‌ಲ್ಯಾಂಡ್, ಅಡಂಗಲ್, 1-ಬಿ ದಾಖಲೆಗಳಲ್ಲಿ ಭೂಮಿಯನ್ನು ಮತ್ತೆ ಸರ್ಕಾರಿ ಭೂಮಿಯಾಗಿ ನೋಂದಾಯಿಸಲಾಗಿದೆ. ಸದ್ಯ ಯಾವುದೇ ನೋಂದಣಿ ಅಥವಾ ಗುತ್ತಿಗೆಗಳನ್ನು ನಡೆಸದಂತೆ ಜಿಲ್ಲಾ ನೋಂದಣಾಧಿಕಾರಿಗೆ ಆದೇಶಿಸಲಾಗಿದೆ.

ಗುರಿ ಸಾಧಿಸಲು ನಿರಂತರ ಪ್ರಯತ್ನ ಅಗತ್ಯ- ಡಾ.ನಾಗಲಕ್ಷ್ಮೀ ಚೌಧರಿ

ರಾಯಚೂರು,ಜು.10-

ಉತ್ತಮ ಶಿಕ್ಷಣದೊಂದಿಗೆ ಸ್ಪಷ್ಟ ಗುರಿಯನ್ನು ಹೊಂದಿ, ಅದನ್ನು ಸಾಧಿಸಲು ನಿರಂತರ ಪರಿಶ್ರಮ ಪಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.



ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆದ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪತ್ರಿಕೆ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು, ಪ್ರಚಲಿತ ವಿದ್ಯಮಾನಗಳ ಬಗ್ಗೆ ಅರಿವು ಹೊಂದಬೇಕು ಹಾಗೂ ಜ್ಞಾನವೇ ವ್ಯಕ್ತಿಯ ದೊಡ್ಡ ಶಕ್ತಿಯಾಗಿದೆ ಎಂದು ತಿಳಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಸವಣ್ಣ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಮೊಬೈಲ್ ಹಾಗೂ ಇಂಟರ್ನೆಟ್ ಬಳಕೆಯಲ್ಲಿ ಎಚ್ಚರಿಕೆ ವಹಿಸಬೇಕು. ಆನ್‌ಲೈನ್ ಸ್ನೇಹ, ಬ್ಲ್ಯಾಕ್‌ಮೇಲ್ ಅಥವಾ ಕಿರುಕುಳ ಎದುರಾದರೆ ತಕ್ಷಣ ಪೋಷಕರು ಹಾಗೂ ಪೊಲೀಸರ ನೆರವು ಪಡೆಯಬೇಕು. ಮಹಿಳಾ ಪೊಲೀಸ್ ಠಾಣೆ ಮತ್ತು ಸರ್ಕಾರದ ಸ'ಹಾ'ಯ'ವಾ'ಣಿ'ಗ'ಳ'ನ'್ನ ಸಮರ್ಪಕವಾಗಿ ಬಳಸಿಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ತಿಳಿಸಿದರು.

ಸಂವಾದದ ವೇಳೆ ಗ್ರಾಮಗಳಿಗೆ ಸಮರ್ಪಕ ಬಸ್ ಸೌಲಭ್ಯ ಇಲ್ಲದ ಕಾರಣ ಕಾಲೇಜಿಗೆ ನಡೆದುಕೊಂಡು ಬರಬೇಕಾಗುತ್ತದೆ ಎಂದು ಕೆಲ ವಿದ್ಯಾರ್ಥಿನಿಯರು ಅಧ್ಯಕ್ಷೆಯ ಗಮನಕ್ಕೆ ತಂದರು.

ಗಂಟೆಗೂ ಹೆಚ್ಚು ಕಾಲ ನಡೆದ ಸಂವಾದದಲ್ಲಿ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಆತ್ಮೀಯವಾಗಿ ಉತ್ತರಿಸಿದ ಅಧ್ಯಕ್ಷೆ, ಕೊನೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಸೆಲ್ಫಿ ತೆಗೆದುಕೊಂಡು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶರಣಮ್ಮ, ಕಾಲೇಜಿನ ಪ್ರಾಚಾರ್ಯ ಡಾ. ಯಂಕಣ್ಣ, ಪರಿಸರ ಪ್ರೇಮಿ ಈರಣ್ಣ ಕೋಸಗಿ, ಸಹಾಯಕ ಪ್ರಾಧ್ಯಾಪಕರಾದ ಡಾ. ಸಂತೋಷ ಕುಮಾರ್, ಮಹದೇವಪ್ಪ, ಇಲಾಖೆಯ ನಿರೂಪಣಾಧಿಕಾರಿ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಗುರಿ ಸಾಧಿಸಲು ನಿರಂತರ ಪ್ರಯತ್ನ ಅಗತ್ಯ: ಡಾ. ನಾಗಲಕ್ಷ್ಮೀ ಚೌಧರಿ

ರಾಯಚೂರು, ಜು.10: ಉತ್ತಮ ಶಿಕ್ಷಣದೊಂದಿಗೆ ಸ್ಪಷ್ಟ ಗುರಿಯನ್ನು ಹೊಂದಿ, ಅದನ್ನು ಸಾಧಿಸಲು ನಿರಂತರ ಪರಿಶ್ರಮ ಪಡಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ವಿದ್ಯಾರ್ಥಿಗಳಿಗೆ ಕರೆ



ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆದ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪತ್ರಿಕೆ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು, ಪ್ರಚಲಿತ ವಿದ್ಯಮಾನಗಳ ಬಗ್ಗೆ ಅರಿವು ಹೊಂದಬೇಕು ಹಾಗೂ ಜ್ಞಾನವೇ ವ್ಯಕ್ತಿಯ ದೊಡ್ಡ ಶಕ್ತಿಯಾಗಿದೆ ಎಂದು ತಿಳಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಸವಣ್ಣ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಮೊಬೈಲ್ ಹಾಗೂ ಇಂಟರ್ನೆಟ್ ಬಳಕೆಯಲ್ಲಿ ಎಚ್ಚರಿಕೆ ವಹಿಸಬೇಕು. ಆನ್‌ಲೈನ್ ಸ್ನೇಹ, ಬ್ಲ್ಯಾಕ್‌ಮೇಲ್ ಅಥವಾ ಕಿರುಕುಳ ಎದುರಾದರೆ ತಕ್ಷಣ ಪೋಷಕರು ಹಾಗೂ ಪೊಲೀಸರ ನೆರವು ಪಡೆಯಬೇಕು. ಮಹಿಳಾ ಪೊಲೀಸ್ ಠಾಣೆ ಮತ್ತು ಸರ್ಕಾರದ ಸಹಾಯವಾಣಿಗಳನ್ನು

3ನೇ ಪುಟಕ್ಕೆ

ಸಮಗ್ರ ನೀರಾವರಿ, ಏಮ್ಸ್ ನಮ್ಮ ಹಕ್ಕು

ಮನದಾಳದ ಮಾತು: ಕೆ. ಶಿವನಗೌಡ ನಾಯಕ, ಮಾಜಿ ಸಚಿವರು

ಕಲ್ಯಾಣ ಕರ್ನಾಟಕದ ನನ್ನ ಪ್ರೀತಿಯ ಅಣ್ಣ-ತಮ್ಮಂದಿರೇ, ಅಕ್ಕ-ತಂಗಿಯರೇ, ರೈತ ಬಂಧುಗಳೇ, ಕಾರ್ಮಿಕರೇ, ಯುವಕರೇ, ವಿದ್ಯಾರ್ಥಿಗಳೇ ಹಾಗೂ ನನ್ನ ತಾಯಂದಿರೇ... ಇಂದು ನಾನು ನಿಮ್ಮ ಮುಂದೆ ರಾಜಕಾರಣಿಯಾಗಿ ನಿಂತಿಲ್ಲ. ಈ ಮಣ್ಣಿನ ಮಗನಾಗಿ, ನಿಮ್ಮಲ್ಲೊಬ್ಬನಾಗಿ, ನನ್ನ ಮನದಾಳದ ನೋವನ್ನು ನಿಮ್ಮೊಂದಿಗೆ ಹಂಚಿಕೊಳ್ಳಲು ಬಂದಿದ್ದೇನೆ. ಅಧಿಕಾರಕ್ಕಾಗಿ ಬಂದಿಲ್ಲ, ಮತ ಕೇಳಲು ಬಂದಿಲ್ಲ. ಈ ನೆಲದ ನೋವು ನನ್ನ ನೋವಾಗಿದೆ. ನಮ್ಮ ಭಾಗದ ಜನರ ಕನಸು ನನ್ನ ಕನಸಾಗಿದೆ. ಅದಕ್ಕಾಗಿಯೇ ನನ್ನ ಮನಸ್ಸಿನ ಮಾತುಗಳನ್ನು ನಿಮ್ಮ ಮುಂದೆ ಇಡುತ್ತಿದ್ದೇನೆ.

ಕಲ್ಯಾಣ ಕರ್ನಾಟಕದ ಜನರ ಬದುಕನ್ನು ಹಲವು ದಶಕಗಳಿಂದ ಕಾಡುತ್ತಿರುವ ಪ್ರಶ್ನೆ ಒಂದೇ. ನಮ್ಮ ಭಾಗಕ್ಕೆ ಸಮಗ್ರ ನೀರಾವರಿ ಯಾವಾಗ? ನಮ್ಮ ಭಾಗದಲ್ಲಿ ಏಮ್ಸ್ ಯಾವಾಗ ಸ್ಥಾಪನೆಯಾಗುತ್ತದೆ? ನಮ್ಮ ನೆಲ ಯಾವಾಗ ಅಭಿವೃದ್ಧಿಯ ಹೊಸ ಹಾದಿ ಹಿಡಿಯುತ್ತದೆ? ಈ ಪ್ರಶ್ನೆಯನ್ನು ನಮ್ಮ ಹಿರಿಯರು ಕೇಳಿದರು. ನಮ್ಮ ತಂದೆ-ತಾಯಿಯರು ಕೇಳಿದರು. ಇಂದು ನಾವು ಕೇಳುತ್ತಿದ್ದೇವೆ. ನಾಳೆ ನಮ್ಮ ಮಕ್ಕಳು ಕೂಡ ಇದೇ ಪ್ರಶ್ನೆಯನ್ನು ಕೇಳಬೇಕಾದರೆ ಅದಕ್ಕಿಂತ ದೊಡ್ಡ ನೋವು ಮತ್ತೊಂದಿಲ್ಲ. ಕಣ್ಣೀರಿನಿಂದ ಹೊಲ ಹಸನಾಗುವುದಿಲ್ಲ; ನೀರಿನಿಂದ ಮಾತ್ರ ಹಸನಾಗುತ್ತದೆ ಎಂಬ ಸತ್ಯವನ್ನು ನಾವು ಮರೆಯಬಾರದು.

ರಾಯಚೂರು, ಯಾದಗಿರಿ, ಕೊಪ್ಪಳ ವಿಜಯನಗರ ಬಳ್ಳಾರಿ ಕಲಬುರಗಿ ಹಾಗೂ ಬೀದರ್ ಭಾಗದ ಜನರು ದುಡಿಯುವುದರಲ್ಲಿ ಯಾರಿಗೂ ಕಡಿಮೆ ಇಲ್ಲ. ಬೆಳಗಿನ ಜಾವವೇ ಹೊಲಕ್ಕೆ ಇಳಿದು ಬೆವರು ಸುರಿಸುವ ರೈತ ನಮ್ಮವನಾಗಿದ್ದಾನೆ. ಬಿಸಿಲನ್ನೂ ಮಳೆಯನ್ನೂ ಲೆಕ್ಕಿಸದೆ ದುಡಿಯುವ ಕಾರ್ಮಿಕ ನಮ್ಮವನಾಗಿದ್ದಾನೆ. ಉತ್ತಮ ಭವಿಷ್ಯದ ಕನಸು ಕಾಣುವ ಸಾವಿರಾರು ಯುವಕರು ಮತ್ತು ವಿದ್ಯಾರ್ಥಿಗಳು ನಮ್ಮವರೇ. ಆದರೆ ಅವರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ಸಿಗುತ್ತಿಲ್ಲ. ರೈತನಿಗೆ ನೀರು ಇಲ್ಲ, ಯುವಕರಿಗೆ ಅವಕಾಶಗಳಿಲ್ಲ, ಬಡವರಿಗೆ ಉತ್ತಮ ಆರೋಗ್ಯ ಸೌಲಭ್ಯಗಳಿಲ್ಲ. ಈ ಕಾರಣದಿಂದಲೇ ನಮ್ಮ ಭಾಗದ ಸಾವಿರಾರು ಕುಟುಂಬಗಳು ಉದ್ಯೋಗಕ್ಕಾಗಿ ಬೆಂಗಳೂರು, ಹೈದರಾಬಾದ್ ಸೇರಿದಂತೆ ಅನೇಕ ನಗರಗಳಿಗೆ ಗುಳೆ ಹೋಗುವ ಪರಿಸ್ಥಿತಿ ಎದುರಿಸುತ್ತಿವೆ. ನಮ್ಮ ಮಕ್ಕಳಿಗೆ ತಮ್ಮದೇ ನೆಲದಲ್ಲಿ ಗೌರವಯುತ ಬದುಕು ಕಟ್ಟಿಕೊಳ್ಳುವ ಅವಕಾಶ ಸಿಗಬೇಕಾದರೆ ಸಮಗ್ರ ಅಭಿವೃದ್ಧಿಯೇ ಏಕೈಕ ಮಾರ್ಗವಾಗಿದೆ.

ನಮ್ಮ ಭಾಗದ ದುರಂತವೇನೆಂದರೆ, ಕೃಷ್ಣಾ ಮತ್ತು ತುಂಗಭದ್ರೆಯಂತಹ ಮಹಾನದಿಗಳು ಹರಿಯುತ್ತಿದ್ದರೂ ನಮ್ಮ ಹೊಲಗಳು ಒಣಗುತ್ತಿವೆ. ಇದು ಪ್ರಕೃತಿಯ ತಪ್ಪಲ್ಲ. ಇದು ಯೋಜನೆಗಳನ್ನು ಪೂರ್ಣಗೊಳಿಸದ ಆಡಳಿತದ ಇಚ್ಛಾ ಶಕ್ತಿಯ ವೈಫಲ್ಯ. ಹಲವು ವರ್ಷಗಳಿಂದ ರೈತರ ಕನಸಾಗಿರುವ ನವಲಿ ಜಲಾಶಯ ಇನ್ನೂ ಸಾಕಾರವಾಗಿಲ್ಲ. ತಿಂಥಣಿ ಸೇತುವೆ ಬಳಿ ನಿರ್ಮಾಣವಾಗಬೇಕಿದ್ದ ಜಲಾಶಯವೂ ಇನ್ನೂ ಕನಸಾಗಿಯೇ ಉಳಿದಿದೆ. ಈ ಎರಡೂ ಯೋಜನೆಗಳು ಜಾರಿಯಾದರೆ ಕಲ್ಯಾಣ ಕರ್ನಾಟಕದ ಲಕ್ಷಾಂತರ ಎಕರೆ ಭೂಮಿ ಹಸಿರಾಗುತ್ತದೆ. ಸಾವಿರಾರು ರೈತರ ಬದುಕು ಬದಲಾಗುತ್ತದೆ. ಈ ಕಾರಣಕ್ಕಾಗಿಯೇ ನಾನು ಸಮಗ್ರ ನೀರಾವರಿಯ ಹೋರಾಟವನ್ನು ನನ್ನ ಜೀವನದ ಸಂಕಲ್ಪವನ್ನಾಗಿ ಮಾಡಿಕೊಂಡಿದ್ದೇನೆ.

ಸಮಗ್ರ ನೀರಾವರಿ ಎಂದರೆ ಕೇವಲ ನೀರಿನ ಯೋಜನೆ ಅಲ್ಲ. ಅದು ರೈತನ ಬದುಕಿನ ಯೋಜನೆ. ಅದು ಹಸಿವನ್ನು ನೀಗಿಸುವ ಯೋಜನೆ. ಅದು ಗ್ರಾಮಗಳ ಆರ್ಥಿಕತೆಯನ್ನು ಬಲಪಡಿಸುವ ಯೋಜನೆ. ರೈತನ ಹೊಲ ಹಸಿರಾದರೆ ಅವನ ಮನೆ ಬೆಳಗುತ್ತದೆ. ರೈತನ ಮನೆ ಬೆಳಗಿದರೆ ಗ್ರಾಮ ಬೆಳೆಯುತ್ತದೆ. ಗ್ರಾಮ ಬೆಳೆದರೆ ಜಿಲ್ಲೆ ಬೆಳೆಯುತ್ತದೆ. ಜಿಲ್ಲೆ ಬೆಳೆದರೆ ರಾಜ್ಯ ಸಮೃದ್ಧಿಯಾಗುತ್ತದೆ. ಆದ್ದರಿಂದ ನೀರಾವರಿ ಎನ್ನುವುದು ಕೇವಲ ರೈತನ ಸಮಸ್ಯೆಯಲ್ಲ; ಅದು ಇಡೀ ಸಮಾಜದ ಅಭಿವೃದ್ಧಿಯ ಪ್ರಶ್ನೆಯಾಗಿದೆ. ನೀರು ಕೊಟ್ಟರೆ ರೈತ ಬದುಕುತ್ತಾನೆ, ರೈತ ಬದುಕಿದರೆ ದೇಶ ಬದುಕುತ್ತದೆ ಎಂಬ ಮಾತು ಎಂದಿಗೂ ಸುಳ್ಳಾಗುವುದಿಲ್ಲ.


ನೀರಿನಷ್ಟೇ ಮುಖ್ಯವಾದ ಮತ್ತೊಂದು ಅಗತ್ಯ ಆರೋಗ್ಯ. ಇಂದು ಬಡ ಕುಟುಂಬದಲ್ಲಿ ಯಾರಿಗಾದರೂ ಗಂಭೀರ ಕಾಯಿಲೆ ಬಂದರೆ ಮೊದಲು ಕಣ್ಣೀರು ಬರುತ್ತದೆ. ನಂತರ ಸಾಲದ ಚಿಂತೆಯು ಆರಂಭವಾಗುತ್ತದೆ. ಚಿಕಿತ್ಸೆಗಾಗಿ ದೂರದ ನಗರಗಳಿಗೆ ಅಲೆದಾಡಬೇಕಾಗುತ್ತದೆ. ಹಣದ ಕೊರತೆಯಿಂದ ಅನೇಕ ಜೀವಗಳು ಕಳೆದುಹೋಗುತ್ತಿರುವುದನ್ನು ನಾವು ಪ್ರತಿದಿನ ನೋಡುತ್ತಿದ್ದೇವೆ. ನಮ್ಮ ತಾಯಂದಿರು, ಹಿರಿಯರು, ಮಕ್ಕಳು ಹಾಗೂ ಬಡ ಜನರು ಉತ್ತಮ ಚಿಕಿತ್ಸೆಗಾಗಿ ನೂರಾರು ಕಿಲೋಮೀಟರ್ ದೂರ ಹೋಗಬೇಕಾದ ಅನಿವಾರ್ಯತೆ ಕೊನೆಗೊಳ್ಳಬೇಕು. ಅದಕ್ಕಾಗಿ ಕಲ್ಯಾಣ ಕರ್ನಾಟಕದಲ್ಲಿ ಏಮ್ಸ್ ಸ್ಥಾಪನೆಯಾಗಲೇಬೇಕು. ಇದು ಯಾವುದೇ ವ್ಯಕ್ತಿಯ ಬೇಡಿಕೆಯಲ್ಲ; ಇದು ನಮ್ಮ ಭಾಗದ ಪ್ರತಿಯೊಬ್ಬ ನಾಗರಿಕನ ಹಕ್ಕಾಗಿದೆ.



ಕಳೆದ ಇಪ್ಪತ್ತೆಂಟು ವರ್ಷಗಳ ಸಾರ್ವಜನಿಕ ಜೀವನದಲ್ಲಿ ನಾನು ಒಂದು ಸತ್ಯವನ್ನು ಅರಿತುಕೊಂಡಿದ್ದೇನೆ. ನಮ್ಮನ್ನು ಹಿಂದೆ ಹಾಕಿದ್ದು ಯಾವುದೇ ಒಂದು ಪಕ್ಷವಲ್ಲ. ನಮ್ಮೊಳಗಿನ ಒಗ್ಗಟ್ಟಿನ ಕೊರತೆಯೇ ನಮ್ಮ ದೊಡ್ಡ ದುರ್ಬಲತೆ. ನವಲಿ ಜಲಾಶಯ ಏಕೆ ಪೂರ್ಣಗೊಂಡಿಲ್ಲ? ತಿಂಥಣಿ ಜಲಾಶಯ ಏಕೆ ನಿರ್ಮಾಣವಾಗಲಿಲ್ಲ? ಸಮಗ್ರ ನೀರಾವರಿ ಏಕೆ ಸಾಕಾರವಾಗಲಿಲ್ಲ? ಇದಕ್ಕೆ ಪ್ರಮುಖ ಕಾರಣ ನಾವು ಒಗ್ಗಟ್ಟಾಗಿ ಧ್ವನಿ ಎತ್ತದಿರುವುದು. ನಾವು ಎಲ್ಲರೂ ಒಂದಾದರೆ ಯಾವ ಸರ್ಕಾರವೂ ನಮ್ಮ ಹಕ್ಕನ್ನು ನಿರಾಕರಿಸಲು ಸಾಧ್ಯವಿಲ್ಲ ಎಂಬ ವಿಶ್ವಾಸ ನನ್ನಲ್ಲಿದೆ.

ಆದ್ದರಿಂದ ಎಲ್ಲ ಪಕ್ಷಗಳ ಮುಖಂಡರಿಗೆ, ಎಲ್ಲ ಸಮಾಜದ ಮುಖಂಡರಿಗೆ, ಎಲ್ಲ ಸಂಘ-ಸಂಸ್ಥೆಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ನಾನು ಕೈಮುಗಿದು ಮನವಿ ಮಾಡುತ್ತೇನೆ. ಈ ಒಂದು ವಿಷಯದಲ್ಲಿ ರಾಜಕೀಯವನ್ನು ಬದಿಗಿಡೋಣ. ಜಾತಿ, ಧರ್ಮ, ಪಕ್ಷದ ಭೇದಗಳನ್ನು ಮರೆತು ಒಂದಾಗೋಣ. ನಮ್ಮ ನೆಲದ ಅಭಿವೃದ್ಧಿಯೇ ನಮ್ಮ ದೊಡ್ಡ ರಾಜಕೀಯವಾಗಲಿ. ಒಗ್ಗಟ್ಟಾಗಿ ನಿಂತ ಜನರ ಹಕ್ಕನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ, ಒಂದು ವೇಳೆ ಈ ಒಂದು ಕಾರ್ಯ ಆಗದೇ ಇದ್ದರೆ ನಾವು ಮುಂದಿನ ಪೀಳಿಗೆಗೆ ವಿಷ ಕೊಟ್ಟಂತೆ ಒಂದು ವೇಳೆ ಇದು ಸಾಧ್ಯವಾದರೆ ನಾವು ಉತ್ತಮ ಸಮಾಜವನ್ನು ಕಟ್ಟಿಕೊಟ್ಟಂತೆ ಎಂದು ಭಾವಿಸಿರುವೆ.

ಕಳೆದ ಹಲವಾರು ವರ್ಷಗಳಿಂದ ಕೆ.ಎಸ್.ಎನ್. ಜನಕಲ್ಯಾಣ ಸಮಿತಿ ಸಾಮಾಜಿಕ ಸೇವೆಗಳಲ್ಲಿ ತೊಡಗಿಸಿಕೊಂಡಿದೆ.



ಮುಂದಿನ ದಿನಗಳಲ್ಲಿ ಇದೇ ಸಮಿತಿಯ ನೇತೃತ್ವದಲ್ಲಿ ಸಮಗ್ರ ನೀರಾವರಿ ಹಾಗೂ ಏಮ್ಸ್ ಸ್ಥಾಪನೆಗಾಗಿ ಹೋರಾಟದ ರೂಪುರೇಷೆಗಳನ್ನು ಸಿದ್ಧಪಡಿಸಿದ್ದೇವೆ. ಈ ಹೋರಾಟ ಯಾವುದೇ ಪಕ್ಷದ ವಿರುದ್ಧವಲ್ಲ, ಯಾವುದೇ ವ್ಯಕ್ತಿಯ ವಿರುದ್ಧವೂ ಅಲ್ಲ. ಇದು ರೈತರ ಬದುಕಿಗಾಗಿ, ಬಡವರ ಆರೋಗ್ಯಕ್ಕಾಗಿ, ಯುವಕರ ಭವಿಷ್ಯಕ್ಕಾಗಿ ಮತ್ತು ಕಲ್ಯಾಣ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗಾಗಿ ನಡೆಯುವ ಜನಾಂದೋಲನವಾಗಿದೆ. ಜುಲೈ 14 ನನ್ನ ಜನ್ಮದಿನ. ಈ ಬಾರಿ ನನಗೆ ಹೂವಿನ ಹಾರ ಬೇಡ. ದೊಡ್ಡ ಬ್ಯಾನರ್‌ಗಳು ಬೇಡ. ಕೇಕ್ ಕತ್ತರಿಸುವ ಸಂಭ್ರಮವೂ ಬೇಡ. ನನ್ನ ಹುಟ್ಟುಹಬ್ಬವನ್ನು ಸಮಗ್ರ ನೀರಾವರಿ ಮತ್ತು ಏಮ್ಸ್ ಸ್ಥಾಪನೆಗಾಗಿ

ಚುನಾವಣಾ ಪ್ರಕ್ರಿಯೆ ಪಾರದರ್ಶಕತೆಗೆ ದೋಷಮುಕ್ತ ಮತದಾರರ ಪಟ್ಟಿ ಅಗತ್ಯ: ಜಿಪಂ ಸಿಇಒ

ಬಳ್ಳಾರಿ,ಜು.10

ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಲೋಪ ದೋಷಗಳಿಲ್ಲದ, ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ದಪಡಿಸುವುದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಗರದ ನಂದಿ ಪಿಯು ಕಾಲೇಜು ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಎಸ್‌ಐಆರ್ ವಿಶೇಷ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ಮುಂಬರುವ ಚುನಾವಣೆಗಳಲ್ಲಿ ಯುವಕರ ಪಾತ್ರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಚುನಾವಣಾ ಆಯೋಗವು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ವಿಶೇಷ ಸಮಗ್ರ ಪರಿಷ್ಕರಣೆ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅರ್ಹತೆ ಪಡೆಯಲಿರುವ ಹೊಸ ಯುವ ಮತದಾರರನ್ನು ಗುರುತಿಸಿ ಪಟ್ಟಿಗೆ ಸೇರಿಸುವುದು. ಹಿಂದೆ ನಡೆದಿರುವಂತೆ ಒಬ್ಬರೇ ವ್ಯಕ್ತಿ ಹಲವು ಬಾರಿ ಮತದಾನ ಮಾಡುವುದು ಅಥವಾ ಮೃತಪಟ್ಟವರ ಹೆಸರಿನಲ್ಲಿ ಮತದಾನವಾಗುವುದನ್ನು ತಡೆಯಲು ಹಳೆಯ ಮತದಾರರ ವಿವರಗಳನ್ನು ಕಟ್ಟುನಿಟ್ಟಾಗಿ ಮರುಪರಿಶೀಲಿಸಲಾಗುತ್ತದೆ ಎಂದರು.

ಸದ್ಯದಲ್ಲೇ ಮತದಾನದ ವಯಸ್ಸನ್ನು ತಲುಪಲಿರುವ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಪ್ರತಿ ಕಾಲೇಜಿನಲ್ಲೂ ಮತದಾರರ ಸಾಕ್ಷರತಾ ಕ್ಲಬ್' ಅನ್ನು ಸ್ಥಾಪಿಸಲಾಗಿದೆ. ರಾಜಕೀಯ ವಿದ್ಯಮಾನಗಳು ಮತ್ತು ಚುನಾವಣಾ ಪ್ರಕ್ರಿಯೆಗಳಿಂದ ಯುವಕರು ದೂರ ಉಳಿಯಬಾರದು, ಬದಲಿಗೆ ಪ್ರಜಾಪ್ರಭುತ್ವದ ಸಕ್ರಿಯ ಪಾಲುದಾರರಾಗಬೇಕು ಎಂಬುದು ಈ ಕ್ಲಬ್‌ನ ಉದ್ದೇಶವಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಕೇವಲ ತಾವಷ್ಟೇ ಜಾಗೃತರಾಗುವು ದಲ್ಲದೆ, ತಮ್ಮ ಕುಟುಂಬದ ಯಾವುದೇ ಅರ್ಹ ಸದಸ್ಯರ ಹೆಸರು ಸೂಕ್ತ ದಾಖಲೆಗಳ



ಕೊರತೆಯಿಂದಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನೂ ಹೊಂದಬೇಕು ಎಂದು ಅವರು ತಿಳಿಸಿದರು.

ಎಸ್‌ಐಆರ್ ಗಣತಿ ನಮೂನೆ ಭರ್ತಿ ಮಾಡುವ ವಿಧಾನ ತಿಳಿಸಿದ ಜಿಪಂ ಸಿಇಒ: ಕುಟುಂಬದ ಹಿರಿಯರು ಅಥವಾ ಪೋಷಕರು ಕಳೆದ 24-25 ವರ್ಷಗಳ ಹಿಂದೆ (2002ರ ಅವಧಿಯಲ್ಲಿ) ಭಾರತದ ಯಾವುದೇ ಭಾಗದಲ್ಲಿ (ಕರ್ನಾಟಕ, ಆಂಧ್ರಪ್ರದೇಶ, ಮಣಿಪುರ ಸೇರಿದಂತೆ ಯಾವುದೇ ರಾಜ್ಯದಲ್ಲಿ) ಮತ ಚಲಾಯಿಸಿದ್ದರೆ, ಆ ವಿವರಗಳನ್ನು ಈ ಅರ್ಜಿಯ ಎಡಭಾಗದಲ್ಲಿ ಭರ್ತಿ ಮಾಡಬೇಕಾಗುತ್ತದೆ.

ಪ್ರಸ್ತುತ 21 ರಿಂದ 23 ವರ್ಷದೊಳಗಿನ ಯುವಕ-ಯುವತಿಯರು 2002ರ ಅವಧಿಯಲ್ಲಿ ಸಣ್ಣ ಮಕ್ಕಳಾಗಿದ್ದರಿಂದ ಮತ ಚಲಾಯಿಸಿರುವುದಿಲ್ಲ. ಅಂತಹವರು ಅರ್ಜಿಯ ಬಲಭಾಗದಲ್ಲಿ ತಮ್ಮ ಪೋಷಕರ (ತಂದೆ, ತಾಯಿ, ಅಜ್ಜ ಅಥವಾ ಅಜ್ಜಿ) ವಿವರಗಳನ್ನು ಭರ್ತಿ ಮಾಡಿ, ತಮ್ಮ ರಕ್ತ ಸಂಬಧಿ ಕುಟುಂಬಸ್ಥರು ಭಾರತದ ಯಾವುದೇ ಭಾಗದಲ್ಲಿ ಮತದಾರರಾಗಿದ್ದರು ಎಂಬುದನ್ನು ಖಚಿತಪಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.

ಜುಲೈ 29 ಕೊನೆಯ ದಿನ:

ಈ ವಿಶೇಷ ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಲು ಜುಲೈ 29 ಕೊನೆಯ ದಿನವಾಗಿದೆ. ನಿಗದಿತ ಅವಧಿಯೊಳಗೆ ಸಾರ್ವಜನಿಕರು ಅಥವಾ ಅವರ ಪೋಷಕರು ಈ ಫಾರ್ಮ್ ಅನ್ನು ಸಲ್ಲಿಸದಿದ್ದರೆ, ಅವರ ಹೆಸರನ್ನು ಮತದಾರರ ಪಟ್ಟಿಯಿಂದಲೇ ಕೈಬಿಡುವ ಸಾಧ್ಯತೆ ಇರುತ್ತದೆ. ಹೆಸರು ಪಟ್ಟಿಯಿಂದ ಹೊರಬಿದ್ದರೆ ಮುಂಬರುವ ಚುನಾವಣೆಗಳಲ್ಲಿ ಮತದಾನದ ಹಕ್ಕನ್ನು ಕಳೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಒಂದು ವೇಳೆ ಬಿಎಲ್‌ಒ ನಿಮ್ಮ ಮನೆಗೆ ಭೇಟಿ ನೀಡದಿದ್ದರೆ, ಅವರಿಗಾಗಿ ಕಾಯುವ ಅಗತ್ಯವಿಲ್ಲ. ಚುನಾವಣಾ ಆಯೋಗದ ಅಧಿಕೃತ ಮೊಬೈಲ್ ಆಪ್ ಆದ ಇಸಿಐ ನೆಟ್ ಅನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಆನ್‌ಲೈನ್ ಮೂಲಕವೇ ಈ ಫಾರ್ಮ್ ಅನ್ನು ಸುಲಭವಾಗಿ ಸಲ್ಲಿಸಬಹುದು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ಅತ್ಯಂತ ಪವಿತ್ರವಾದದ್ದು. ಈ ನಿಟ್ಟಿನಲ್ಲಿ ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಜುಲೈ 29 ರಿಂದ ಫಾರ್ಮ್ ನಂಬರ್ 6 ವಿತರಣೆ ಆರಂಭವಾಗಲಿದ್ದು, ಸಾರ್ವಜನಿಕರು ಇದನ್ನು ಪಡೆದು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಭಾರತೀಯ ನಾಗರಿಕರಾಗಿ ನಮ್ಮ ಹಕ್ಕನ್ನು ಚಲಾಯಿಸಲು ಮತದಾರರ ಗುರುತಿನ ಚೀಟಿ ಅತ್ಯಗತ್ಯ. ಹಾಗಾಗಿ ಯಾವುದೇ ಕಾರಣಕ್ಕೂ ನಿಮ್ಮ ಕುಟುಂಬದ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಎಚ್ಚರ ವಹಿಸಿ, ಜುಲೈ 29 ರಿಂದ ಆರಂಭವಾಗುವ ಈ ಪ್ರಕ್ರಿಯೆಯ ಸದುಪಯೋಗ ಪಡೆದುಕೊಳ್ಳಿ ಎಂದು ಮನವಿ ಮಾಡಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರರಾದ ಶಿವಲಿಂಗ ರೆಡ್ಡಿ ಹಾಗೂ ಅಕ್ಕಿ ಮಲ್ಲಿಕಾರ್ಜುನ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಎಸ್‌ಐಆರ್ ಪ್ರಕ್ರಿಯೆ ಕುರಿತು ಸವಿವರವಾದ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಹನುಮಂತರಾವ್, ನೋಡಲ್ ಅಧಿಕಾರಿ ಕೆ.ನಾಗೀರೆಡ್ಡಿ, ನಂದಿ ಪಿಯು ಕಾಲೇಜಿನ ಪ್ರಾಂಶುಪಾಲರು ಗಳಾದ ಜಗದೀಶ್ ಬಾಬು, ಅನಿತಾ ಸೇರಿದಂತೆ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಶ್ಯಾಮ ಪ್ರಸಾದ್ ಮುಖರ್ಜಿ ವಿಚಾರಧಾರೆ ಕುರಿತು ಸಂಶೋಧನೆ ನಡೆಯಲಿ: ರಾಕ ಸುಧಾಕರ್ ರಾವ್

ಕಲಬುರಗಿ,ಜು.10-

ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಜೀವನ, ವಿಚಾರಧಾರೆ ಹಾಗೂ ರಾಷ್ಟ್ರ ನಿರ್ಮಾಣಕ್ಕೆ ಅವರು ನೀಡಿದ ಕೊಡುಗೆಗಳ ಕುರಿತು ವಿಶ್ವವಿದ್ಯಾಲಯಗಳಲ್ಲಿ ಪುರಾವೆ ಆಧಾರಿತ ಮತ್ತು ಶೈಕ್ಷಣಿಕ ಸಂಶೋಧನೆಗಳು ನಡೆಯಬೇಕು ಎಂದು ಹೈದರಾಬಾದ್‌ನ ಹಿರಿಯ ಪತ್ರಕರ್ತ, ಲೇಖಕ ಹಾಗೂ ಸಾಮಾಜಿಕ ಕಾರ್ಯಕರ್ತ ಕೆ. ರಾಕ ಸುಧಾಕರ್ ರಾವ್ ಅಭಿಪ್ರಾಯಪಟ್ಟರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ) ವತಿಯಿಂದ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ 125ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ''ವಿಕಸಿತ ಭಾರತಕ್ಕಾಗಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ದೃಷ್ಟಿಕೋನ'' ವಿಷಯದ ವಿಶೇಷ ಉಪನ್ಯಾಸದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಡಾ. ಮುಖರ್ಜಿ ಅವರು ಶ್ರೇಷ್ಠ ಶಿಕ್ಷಣ ತಜ್ಞ, ಸಮರ್ಥ ಸಂಸದೀಯ ನಾಯಕ ಹಾಗೂ ರಾಷ್ಟ್ರೀಯ ಚಿಂತಕರಾಗಿದ್ದು, ಶಿಕ್ಷಣ, ಕೈಗಾರಿಕಾ ಅಭಿವೃದ್ಧಿ, ಸಾಂವಿಧಾನಿಕ ಮೌಲ್ಯಗಳು ಮತ್ತು ರಾಷ್ಟ್ರೀಯ ಏಕೀಕರಣಕ್ಕೆ ನೀಡಿದ ಕೊಡುಗೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

33ನೇ ವಯಸ್ಸಿನಲ್ಲೇ ದೇಶದ ಅತ್ಯಂತ ಕಿರಿಯ ಉಪಕುಲಪತಿಗಳಲ್ಲಿ ಒಬ್ಬರಾಗಿ ಸೇವೆ ಸಲ್ಲಿಸಿದ್ದ ಅವರು, ಬಳಿಕ ಕೇಂದ್ರ ಸಚಿವ ಸಂಪುಟದಲ್ಲಿಯೂ ಕಾರ್ಯನಿರ್ವಹಿಸಿ ರಾಷ್ಟ್ರೀಯ ಹಿತಾಸಕ್ತಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ಹೋರಾಟ ನಡೆಸಿದ್ದರು ಎಂದು ವಿವರಿಸಿದರು.

ದೇಶ ವಿಭಜನೆಯ ಸಂದರ್ಭದಲ್ಲಿ ಅವರ ಪಾತ್ರ, ಸ್ಥಳಾಂತರಗೊಂಡ ಸಮುದಾಯಗಳ ಪರ ಕಾಳಜಿ, ಅಭಿವ್ಯಕ್ತಿ ಸ್ವಾತಂತ್ರ್ಯದ ಕುರಿತ ದೃಢ ನಿಲುವು ಹಾಗೂ ಸಾಂವಿಧಾನಿಕ ಮೌಲ್ಯಗಳ ರಕ್ಷಣೆಗೆ ನೀಡಿದ ಆದ್ಯತೆ ಗಮನಾರ್ಹವಾಗಿದೆ.

ಜಮ್ಮು-ಕಾಶ್ಮೀರದ ವಿಶೇಷ ಸ್ಥಾನಮಾನದ ಕುರಿತು ಅವರು ಪ್ರತಿಪಾದಿಸಿದ್ದ ''ಒಂದು ರಾಷ್ಟ್ರ, ಒಂದು ಸಂವಿಧಾನ, ಒಂದು ಧ್ವಜ'' ಪರಿಕಲ್ಪನೆ ಇಂದಿಗೂ ರಾಷ್ಟ್ರೀಯ ಚರ್ಚೆಗಳಲ್ಲಿ ಮಹತ್ವ ಪಡೆದಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡಿ, ರಾಷ್ಟ್ರೀಯ ನಾಯಕರ ಜೀವನ ಮತ್ತು ಕೊಡುಗೆಗಳ ಕುರಿತು ವಸ್ತುನಿಷ್ಠ ಹಾಗೂ ಮಾಹಿತಿಯುಕ್ತ ಶೈಕ್ಷಣಿಕ ಚರ್ಚೆಗಳನ್ನು ಉತ್ತೇಜಿಸುವ ಜವಾಬ್ದಾರಿ ವಿಶ್ವವಿದ್ಯಾಲಯಗಳ ಮೇಲಿದೆ ಎಂದು ಹೇಳಿದರು.

ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಮಾತನಾಡಿ, ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ದೃಷ್ಟಿಕೋನವು ವಿಕಸಿತ ಭಾರತದ ಆಶಯಕ್ಕೆ ಪೂರಕವಾಗಿದೆ. ನವೀನ ಶಿಕ್ಷಣ, ಸಂಶೋಧನೆ, ನಾವೀನ್ಯತೆ ಹಾಗೂ ರಾಷ್ಟ್ರೀಯ ಸೇವೆಯ ಮೂಲಕ ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರು ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.


ಕಾರ್ಯಕ್ರಮದಲ್ಲಿ ಪ್ರೊ. ಚನ್ನವೀರ್ ಆರ್.ಎಂ. ಸ್ವಾಗತಿಸಿದರು. ಪ್ರೊ. ಬಸವರಾಜ್ ಎಂ. ಕುಬಕಡ್ಡಿ ವಂದಿಸಿದರು. ಡಾ. ಶ್ಯಾಮಲಾ ಕಾರ್ಯಕ್ರಮ ನಿರೂಪಿಸಿದರು. ವಿಶ್ವವಿದ್ಯಾಲಯದ ಸಂಗೀತ ಮತ್ತು ಲಲಿತಕಲಾ ವಿಭಾಗದ ವಿದ್ಯಾರ್ಥಿಗಳು ವಂದೇ ಮಾತರಂ ಹಾಗೂ ರಾಷ್ಟ್ರಗೀತೆಯನ್ನು ಹಾಡುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಸೌರ, ಪವನ, ಟ್ರಾನ್ಸ ಮಿಷನ್‌ಯೋಜನೆಗೆ ಸಂಬಂಧಿಸಿದಂತೆ ರೈತರ, ಭೂಮಾಲೀಕರ ದೂರುಗಳ ಶೀಘ್ರ ಪರಿಹಾರಕ್ಕಾಗಿ ಸಮಿತಿ ರಚಿಸಿ ಕೊಪ್ಪಳ ಜಿಲ್ಲಾಧಿಕಾರಿಗಳಿಂದ ಆದೇಶ

ಕೊಪ್ಪಳ ಜು.10-

ಕೊಪ್ಪಳ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮಂಜೂರಾಗಿರುವ 7,000 ಮೆಗಾವ್ಯಾಟ್ ನವೀಕರಿಸಬಹುದಾದ ಇಂಧನ (ಸೌರಶಕ್ತಿ, ಪವನ ಶಕ್ತಿ ಮತ್ತು ಟ್ರಾನ್ಸ ಮಿಷನ್ (ವಿದ್ಯುತ್ ಪ್ರಸರಣ) ಯೋಜನೆಯ ಮೂಲಕ ಜಿಲ್ಲೆಯ ಕೆಲವು ತಾಲೂಕಿನ ಹಲವು ಗ್ರಾಮಗಳ ಜಮೀನುಗಳಲ್ಲಿ ವಿದ್ಯುತ್ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತಾಪಿತ ಯೋಜನೆಗಳಿಂದ ರೈತರ ಭೂಮಿ, ಬೆಳೆ, ಭೂ ಪರಿಹಾರ ಇತರೆ ಅಂಶಗಳಿಗೆ ಸಂಬಂಧಿಸಿದಂತೆ ಹಲವು ತೊಂದರೆಗಳಾಗುತ್ತಿರುವುದಾಗಿ ಕೊಪ್ಪಳ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ದೂರುಗಳು ಸ್ವೀಕೃತಗೊಂಡಿರುವ ಹಿನ್ನೆಲೆಯಲ್ಲಿ ರೈತರ, ಭೂಮಾಲೀಕರ ಹಿತರಕ್ಷಣೆಗಾಗಿ ಹಾಗು ಸದರಿ ಯವರ ದೂರುಗಳಿಗೆ ಶೀಘ್ರ ಸ್ಪಂದಿಸುವುದು ಮತ್ತು ಪರಿಹಾರ ದೊರಕಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡು ಸಮಿತಿಯನ್ನು ರಚಿಸಿ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಅಪರ ಜಿಲ್ಲಾಧಿಕಾರಿಗಳು ಸಮಿತಿಯ ಅಧ್ಯಕ್ಷರಾಗಿದ್ದು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಕಾರ್ಯನಿರ್ವಾಹಕ ಅಭಿಯಂತರರು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ. ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕರು, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ತೋಟಗಾರಿಕಾ ಇಲಾಖೆಯ ಜಂಟಿ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್‌ನ ಕಾರ್ಯನಿರ್ವಾಹಕ ಅಭಿಯಂತರರು, ಕೊಪ್ಪಳ, ಗಂಗಾವತಿ, ಕುಷ್ಟಗಿ, ಕನಕಗಿರಿ, ಕಾರಟಗಿ, ಕುಕನೂರ ಮತ್ತು ಯಲಬುರ್ಗಾ ತಾಲೂಕಿನ ತಹಸೀಲ್ದಾರರು, ಕೊಪ್ಪಳ ಪವರ್‌ಗ್ರಿಡ್ ಕೊಪ್ಪಳ ಗದಗ ಟ್ರಾನ್ಸ ಮಿಷನ್ ಲಿಮಿಟೆಡ್‌ನ ಪ್ರಧಾನ



ವ್ಯವಸ್ಥಾಪಕರು ಹಾಗೂ ಪಿಜಿಸಿಐಎಲ್ ಅಧಿಕಾರಿಗಳು ಸಮಿತಿಯ ಸದಸ್ಯರಾಗಿರುತ್ತಾರೆ.

ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರಿ ಸ್ವಾಮ್ಯದ ಹಾಗೂ ವಿವಿಧ ಖಾಸಗಿ ಕಂಪನಿಗಳಿದ ಒಟ್ಟಾರೆಯಾಗಿ 7,000 ಮೆಗಾವ್ಯಾಟ್ ನವೀಕರಿಸಬ ಹುದಾದ ಇಂಧನ (ಸೌರಶಕ್ತಿ ಮತ್ತು ಪವನಶಕ್ತಿ) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕೃಷಿ ಭೂಮಿಯನ್ನು ಸೌರಶಕ್ತಿ/ಪವನಶಕ್ತಿ ಯೋಜನೆಗೆ ಬಳಸಲು ಪ್ರತ್ಯೇಕವಾಗಿ ಭೂ ಪರಿವರ್ತನೆ (ನಾನ್ ಅಗ್ರಿಕಲ್ಚರಲ್) ಮಾಡುವ ಅಗತ್ಯವಿರುವುದಿಲ್ಲ. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಸರ್ಕಾರಿ ಸ್ವಾಮ್ಯ/ವಿವಿಧ ಕಂಪನಿಗಳು ಕೆಲವೊಮ್ಮೆ ರೈತರ/ಭೂಮಾಲೀಕರೊಂದಿಗೆ ಒಪ್ಪಂದ ಪತ್ರ/ಒಡಂಬಡಿಕೆ ಪತ್ರಗಳನ್ನು ಮಾಡಿಕೊಂಡಿರುವುದು ಕಂಡು ಬಂದಿರುತ್ತದೆ. ರೈತರು ತಮ್ಮ ಜಮೀನುಗಳಲ್ಲಿ ಈ ಯೋಜನೆಯ ವಿದ್ಯುತ್ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುಮತಿಯನ್ನು ನೀಡಿ ಪರಿಹಾರ ಧನವನ್ನು ಪಡೆದುಕೊಂಡಿರುತ್ತಾರೆ. ಇಂತಹ ಪ್ರಕರಣಗಳಲ್ಲಿ ಜಮೀನಿನ ಭೂಪರಿಹಾರ ನಿಗದಿಯು ಸಂಪೂರ್ಣವಾಗಿ ರೈತರು ಮತ್ತು ಕಂಪನಿಯ ನಡುವಿನ ಖಾಸಗಿ ವಿಷಯವಾಗಿರುತ್ತದೆ. ಇದಕ್ಕೆ ಸಂಬಧಿಸಿದತೆ ಮಾನ್ಯ ಸರ್ಕಾರದಿಂದ ಯಾವುದೇ ಪ್ರತ್ಯೇಕ ಮಾರ್ಗಸೂಚಿಗಳಿರುವುದಿಲ್ಲ. ಇದು ಸಂಪೂರ್ಣವಾಗಿ ರೈತರ ಸ್ವ-ಇಚ್ಛೆಗೆ ಒಳಪಟ್ಟಿರುತ್ತದೆ. ಇಂತಹ ಸಂದರ್ಭಗಳಲ್ಲಿ ವಿದ್ಯುತ್ ಕಾಮಗಾರಿಯನ್ನು ಅನುಷ್ಠಾನಗೊಳಿಸುವವರು ಕೆಲವೊಮ್ಮೆ ರೈತರಿಗೆ ಆರಂಭದಲ್ಲಿ ಅರ್ಧ ಪರಿಹಾರ ಮೊತ್ತವನ್ನು ಪಾವತಿಸಿ ತದನಂತರ ವಿದ್ಯುತ್ ಕಾಮಗಾರಿಗಳು ಪೂರ್ಣಗೊಂಡ ನಂತರ ಬಾಕಿ ಉಳಿದ ಪರಿಹಾರ ಧನವನ್ನು ಪಾವತಿಸದೇ ಪಲಾಯನ/ನಿರ್ಗಮನ ಮಾಡಿರುವ ಕುರಿತಂತೆ ದೂರುಗಳು ಸ್ವೀಕೃತಗೊಂಡಲ್ಲಿ ರೈತರ ಕಾಳಜಿ ಮತ್ತು ಹಿತಾಸಕ್ತಿಯಿಂದ ಈ ಸಮಿತಿಯು ಸದರಿ ದೂರಿನ ಕುರಿತು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಬೇಕು.

ಪ್ರಸ್ತಾಪಿತ ನವೀಕರಿಸಬಹುದಾದ ಇಂಧನ (ಸೌರಶಕ್ತಿ, ಪವನಶಕ್ತಿ ಮತ್ತು ಟ್ರಾನ್ಸಿಮಿಷನ್‌ಲೈನ್ (ವಿದ್ಯುತ್ ಪ್ರಸರಣ)) ವಿದ್ಯುತ್ ಉತ್ಪಾದನೆ ಹಾಗೂ ಸರಬರಾಜು ಮಾಡುವ ಯೋಜನೆಗಳು ಮಹತ್ವಾಕಾಂಕ್ಷಿ ಯೋಜನೆ ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಒಳಗೊಂಡಿರುವುದರಿದ ಈ ಯೋಜನೆಗಳಿಗೆ ಜಿಲ್ಲಾಡಳಿತದಿಂದ ಅಗತ್ಯ ಸಹಕಾರ ನೀಡಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಈ ಯೋಜನೆಗಳ ಮಹತ್ವ ಹಾಗೂ ಅಗತ್ಯತೆ ಕುರಿತು ಸಾರ್ವಜನಿಕರಿಗೆ/ ರೈತರಿಗೆ/ ಭೂಮಾಲೀಕರಿಗೆ ಅಗತ್ಯ ತಿಳಿವಳಿಕೆ ಮೂಡಿಸಬೇಕು. ಈ ಯೋಜನೆಗೆ ಒಳಪಡುವ ರೈತರ/ ಭೂಮಾಲೀಕರ ಸಮಸ್ಯೆಗಳಿಗೆ ಕೂಡ ಸೂಕ್ತ ರೀತಿಯಲ್ಲಿ ಸ್ಪಂದಿಸುವುದು ಹಾಗೂ ಅವರ ಸಮಸ್ಯೆಗಳಿಗೆ ಪರಿಹಾರ ದೊರಕಿಸುವುದು ಕೂಡ ಜಿಲ್ಲಾಡಳಿತ ಕರ್ತವ್ಯವಾಗಿರುತ್ತದೆ. ಈ ಪ್ರಯುಕ್ತ ಈ ಸಮಿತಿಯಲ್ಲಿ ನಿಯೋಜಿಸಲಾದ ಅಧಿಕಾರಿ ವರ್ಗದವರು ಮೇಲೆ ತಿಳಿಸಲಾದ ಬೇರೆ ಬೇರೆ ಅಂಶಗಳ ಕುರಿತಂತೆ ನಿಯಮಾನುಸಾರ ಅಗತ್ಯ ಕ್ರಮವಹಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲು ರಚಿಸಿದ ಸಮಿತಿಗೆ ಸೂಚಿಸಿ ಡಿಸಿ ಆದೇಶಿಸಿದ್ದಾರೆ.

ಬೆಂಗಳೂರಿನಲ್ಲಿ ಜುಲೈ 11 ರಂದು ಸರ್ಕಾರಿ ನೌಕರರ ಅಭಿನಂದನಾ ಸಮಾರಂಭ ಹಾಗೂ ಹಕ್ಕೊತ್ತಾಯ ಕಾರ್ಯಕ್ರಮ: ಬಳ್ಳಾರಿಯಿಂದ 500ಕ್ಕೂ ಹೆಚ್ಚು ನೌಕರರು ಭಾಗಿ



ಬಳ್ಳಾರಿ,ಜು.10-

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ನೂತನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ್ ಅವರಿಗೆ ನಮ್ಮ ಭಿಮಾನದ ಅಭಿನಂದನಾ ಸಮಾರಂಭ ಹಾಗೂ ಪ್ರಮುಖ ಬೇಡಿಕೆಗಳ ಹಕ್ಕೊತ್ತಾಯ ಕಾರ್ಯಕ್ರಮವನ್ನು ಜು.11 ರಂದು ಬೆಂಗಳೂರಿನ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಆಯೋಜಿ ಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರಾದ ಡಾ. ನೆಲ್ಲುದ್ರಿ ಸದಾನಂದ ತಿಳಿಸಿದ್ದಾರೆ.

ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರುಗಳಾದ ಡಾ. ನಿರ್ಮಲಾನಂದನಾಥ ಮಹಾಸ್ವಾಮೀ ಜಿ ಯವರು ಹಾಗೂ ತುಮಕೂರು ಸಿದ್ದಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮೀಜಿಯವರು ವಹಿಸಲಿದ್ದಾರೆ.

ಸಿಜಿಹೆಚ್‌ಎಸ್ ದರ ಹೆಚ್ಚಳಕ್ಕೆ ಕೃತಜ್ಞತೆ: ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡ ತಕ್ಷಣವೇ ಸರ್ಕಾರಿ ನೌಕರರ ಆರೋಗ್ಯ ಚಿಕಿತ್ಸೆ ಗೆ ಸಂಬಧಿಸಿದ ಸಿಜಿಹೆಚ್ ಎಸ್ ದರಗಳನ್ನು ಹೆಚ್ಚಿಸಿ ಆದೇಶ ಹೊರಡಿಸಿದ್ದಾರೆ.

ಇದರಿಂದ ಸರ್ಕಾರಕ್ಕೆ 430 ಕೋಟಿ ರೂ.ಗಳ ಹೆಚ್ಚುವರಿ ಅನುದಾನ ವೆಚ್ಚವಾಗಲಿ ದ್ದು, ಈ ಹಿತರಕ್ಷಣಾ ಕ್ರಮಕ್ಕಾಗಿ ಸಂಘವು ಮುಖ್ಯಮಂತ್ರಿಗಳಿಗೆ ಮತ್ತು ಉಪ ಮುಖ್ಯಮಂತ್ರಿಗಳಿಗೆ ವಿಶೇಷ ಅಭಿನಂದನೆ ಸಲ್ಲಿಸಲಿದೆ.

ಪ್ರಮುಖ ಬೇಡಿಕೆಗಳ ಹಕ್ಕೊತ್ತಾಯ: ಸಹಕಾರ ಮತ್ತು ಸಮನ್ವಯತೆಯಿಂದ ಬೇಡಿಕೆಗಳನ್ನು ಈಡೇರಿಸಿಕೊಳ್ಳುವ ಸಂಪ್ರದಾಯ ಹೊಂದಿರುವ ಸಂಘವು, ಈ ವೇದಿಕೆಯ ಮೂಲಕ ಸರ್ಕಾರದ ಮುಂದೆ ಎರಡು ಪ್ರಮುಖ ಬೇಡಿಕೆಗಳನ್ನು ಮಂಡಿಸಲಿದೆ.

2023ರ ಚುನಾವಣಾ ಪ್ರಣಾಳಿಕೆಯಲ್ಲಿ ಸರ್ಕಾರ ನೀಡಿದ್ದ ಭರವಸೆಯಂತೆ ರಾಷ್ಟಿಯ ಪಿಂಚಣಿ ಯೋಜನೆ ರದ್ದುಪಡಿಸಿ, ಹಳೇ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಬೇಕು. ಈಗಾಗಲೇ ಕಾಂಗ್ರೆಸ್ ಆಡಳಿತವಿರುವ 5 ರಾಜ್ಯಗಳಲ್ಲಿ ಇದನ್ನು ಜಾರಿಗೊಳಿಸಲಾಗಿದೆ.

ದೇಶದ ಸುಮಾರು 22 ರಾಜ್ಯಗಳಲ್ಲಿ ಈಗಾಗಲೇ ಕೇಂದ್ರ ಮಾದರಿ ವೇತನ ಜಾರಿಯಲ್ಲಿದೆ. ರಾಜ್ಯದ 7ನೇ ವೇತನ ಆಯೋಗವೂ ಸಹ ತನ್ನ ವರದಿಯಲ್ಲಿ ಇದನ್ನು ಅನುಸರಿಸಲು ಶಿಫಾರಸ್ಸು ಮಾಡಿದ್ದು, ಇದನ್ನು ಕರ್ನಾಟಕದಲ್ಲೂ ಅನುಷ್ಠಾನಗೊಳಿಸಬೇಕು.

★ಬಳ್ಳಾರಿ ಜಿಲ್ಲೆಯಿಂದ ವ್ಯಾಪಕ ಬೆಂಬಲ:★

ಜುಲೈ 11 ಎರಡನೇ ಶನಿವಾರದ ರಜಾದಿನವಾಗಿರುವುದರಿಂದ ಜಿಲ್ಲೆಯ ಸಂಡೂರು, ಸಿರುಗುಪ್ಪ, ಕಂಪ್ಲಿ, ಕುರಗೋಡು ತಾಲೂಕುಗಳು ಸೇರಿದಂತೆ ಬಳ್ಳಾರಿ ಜಿಲ್ಲೆಯಿಂದ ಅಂದಾಜು 500ಕ್ಕೂ ಹೆಚ್ಚು ಸರ್ಕಾರಿ ನೌಕರರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಬಿ.ಎಲ್.ಒ ಹಾಗೂ ಎಸ್.ಐ.ಆರ್ ಕಾರ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಗಳಿಗೆ ಶನಿವಾರದಂದು ಕಾರ್ಯಕ್ರಮದಲ್ಲಿ ಭಾಗವಹಿಸಲು ವಿನಾಯಿತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದ್ದು, ಈ ಕಾರ್ಯವನ್ನು ಮುಂದಿನ ದಿನಗಳಲ್ಲಿ ಸರಿದೂಗಿಸಿಕೊಡಲಾಗುವುದು. ನೌಕರರ ಅನುಕೂಲಕ್ಕಾಗಿ ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಿದ ವಾಹನ ಸೌಕರ್ಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಗನವಾಡಿ ಮಕ್ಕಳಿಗೆ ಅಕ್ಷರಾಭ್ಯಾಸ ಹಾಗೂ ಬೀಳ್ಕೊಡುಗೆ ಕಾರ್ಯಕ್ರಮ

ಕೊಪ್ಪಳ ಜುಲೈ 10-

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಕಲಿಕಾ ಟಾಟಾ ಟ್ರಸ್ಟ್‌ಸಹಯೋಗದೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಗುರುವಾರದಂದು ಕೊಪ್ಪಳ ಯೋಜನೆಯ ಹಿರೇ ಸೂಳಿಕೇರಿ ತಾಂಡಾದಲ್ಲಿ ಅಂಗನವಾಡಿ ಮಕ್ಕಳಿಗೆ ಅಕ್ಷರಾಭ್ಯಾಸ ಹಾಗೂ ಒಂದನೇ ತರಗತಿಗೆ ಹೋಗುವ 10 ಮಕ್ಕಳಿಗೆ ಬೀಳ್ಕೊಡುಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಅಂಗನವಾಡಿಗೆ ಪ್ರವೇಶ ಪಡೆಯುವ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುವ ಮೂಲಕ ಅಂಗನವಾಡಿಯಲ್ಲಿ ಮೂರು ವರ್ಷ ಶಾಲಾ ಪೂರ್ವ ಶಿಕ್ಷಣ ಅಧ್ಯಯನ ಮಾಡಿ ಒಂದನೇ ತರಗತಿಗೆ ಹೋಗುವ



ಮಕ್ಕಳಿಗೆ ಬೀಳ್ಕೊಡುಗೆ ಕಾರ್ಯಕ್ರಮ ಮಾಡಲಾಯಿತು ಹಾಗೂ ಅತಿಥಿಗಳಿಂದ ಮಕ್ಕಳಿಗೆ ಅಕ್ಷರಾಭ್ಯಾಸವನ್ನು ಮಾಡಿಸಲಾಯಿತು.

ಒಂದನೇ ತರಗತಿಗೆ ಹೋಗುವ ಮಕ್ಕಳು ಪ್ರಸ್ತುತ ಇಲ್ಲಿಯವರೆಗೆ ಅಂಗನವಾಡಿಯಲ್ಲಿ ಕಲಿತ ಚಟುವಟಿಕೆಗಳು, ಆಕಾರಗಳು, ಬಣ್ಣಗಳು, ಅಂಕಿಗಳು, ಅಂಗನವಾಡಿ ನಿಯಮಗಳು, ಶಿಶು ಗೀತೆಗಳು, ಚಿಕ್ಕದು ದೊಡ್ಡದು, ಭೌತಿಕ ಚಟುವಟಿಕೆ ಹಾಗೂ ಅಂಕಿಗಳ ಕುರಿತು ಮಕ್ಕಳಿಂದ ಚಟುವಟಿಕೆ ಮಾಡಿಸಲಾಯಿತು. ಕಾರ್ಯಕ್ರಮಕ್ಕೆ ಶಾಲಾಪೂರ್ವ ಶಿಕ್ಷಣದ ಕುರಿತು ಮಾಹಿತಿ ನೀಡಿ ಮಕ್ಕಳು ಚಟುವಟಿಕೆ ಆಧಾರಿತ ಶಿಕ್ಷಣವನ್ನು ನೀಡುವಲ್ಲಿ ಶಾಲಾ ಪೂರ್ವ ಶಿಕ್ಷಣವು ಯಶಸ್ವಿ ಕಾರ್ಯಕ್ರಮವಾಗಿರುತ್ತದೆ. ಮಕ್ಕಳಿಗೆ ಅಂಗನವಾಡಿ ಕೇಂದ್ರವು ಭದ್ರಬುನಾದಿಯಾಗಿ ಕೆಲಸ ನಿರ್ವಹಿಸುತ್ತದೆ ಎಂದು ಜಿಲ್ಲಾ ಸಂಪನ್ಮೂಲ ವ್ಯಕ್ತಿ ಸಿದ್ದಪ್ಪ ಕುರಿ ಹೇಳಿದರು. ಪ್ರಾಥಮಿಕ ಶಾಲಾ ಮುಖ್ಯ ಗುರುಗಳಾದ ಹನುಮಂತಪ್ಪ ಮಾತನಾಡಿ, ನಾವು ಕಲಿಯುವಾಗ ಯಾವುದೇ ಚಟುವಟಿಕೆಯನ್ನು ಮಾಡುತ್ತಿರಲಿಲ್ಲ. ಇಂದಿನ ಮಕ್ಕಳು ಕಂಪ್ಯೂಟರ್‌ನತೆ ಉತ್ತರವನ್ನು ನೀಡುತ್ತಾರೆ. ಅಂಗನವಾಡಿಯಲ್ಲಿ ಕಲಿತ ಮಕ್ಕಳು ಒಂದನೇ ತರಗತಿಗೆ ಬಂದಾಗ ಧೈರ್ಯವಾಗಿ ಉತ್ತರಿಸುವ ಮತ್ತು ಪ್ರತಿದಿನ ಶಾಲೆಗೆ ಬರುವ ಹವ್ಯಾಸವನ್ನು ರೂಢಿಸಿಕೊಂಡಿ ದ್ದಾರೆ. ಇದು ನಮಗೆ ಬಹಳ ಖುಷಿಯನ್ನು ತಂದುಕೊಡುತ್ತದೆ. ಮಕ್ಕಳ ತೊದಲು ನುಡಿಯಲ್ಲಿ ಚಟುವಟಿಕೆಗಳನ್ನು ಮಾಡುವುದನ್ನು ನೋಡಿದಾಗ ಬಹಳ ಖುಷಿ ಆಗುತ್ತದೆ ಎಂದು ಹೇಳಿದರು. ಹಾಗೆಯೇ ಪಾಲಕರು ಕೂಡ ಇನ್ನು ಮೇಲೆ ತಪ್ಪದೇ ಸಹಾಯಕಿ ಅಂಗನವಾಡಿಗೆ ಕರೆದುಕೊಂಡು ಹೋಗುವ ಮೊದಲು ಮಕ್ಕಳನ್ನು ಶಾಲೆಗೆ ತಯಾರಿ ಮಾಡಿ ಕಳಿಸುತ್ತೇವೆ ಎಂದು ಸಭೆಯಲ್ಲಿ ಹೇಳಿಕೊಂಡರು.


ಕಾರ್ಯಕ್ರಮದಲ್ಲಿ ಮೇಲ್ವಿಚಾರಕರು ಕಾರ್ಯಕ್ರಮ ನಿರೂಪಿಸಿದರು. ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿ ಯರು, ಶಾಲಾ ಅಧ್ಯಕ್ಷರು, ಬಾಲ ವಿಕಾಸ ಕಮಿಟಿ ಅಧ್ಯಕ್ಷರು ಹಾಗೂ ಪ್ರಾಥಮಿಕ ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷರಾದ ಕೃಷ್ಣಪ್ಪ, ಮೇಲ್ವಿಚಾರಕಿ ಮಂಜುಳಾ ಕುಂಬಾರ್ ಅಂಗನವಾಡಿ ಕಾರ್ಯಕರ್ತರು ,ಸಹಾ ಯಕರು ಸೇರಿ ಇನ್ನಿತರರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

ಜಿಲ್ಲೆಯಾದ್ಯಂತ ಶೇ.86.09ರಷ್ಟು ಗಣತಿ ನಮೂನೆ ವಿತರಣೆ : ಡಿಸಿ ಇಕ್ರಮ್ ಶರೀಫ್

ಕಲಬುರಗಿ,ಜು.10-

ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು, ಜಿಲ್ಲೆಯಾದ್ಯಂತ ಗುರುವಾರದ ಅಂತ್ಯಕ್ಕೆ ಒಟ್ಟು 23,71,542 ಮತದಾರರ ಪೈಕಿ 20,41,574 (ಶೇ.86.09)ರಷ್ಟು ಗಣತಿ ನಮೂನೆ ವಿತರಣೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಇದುವರೆಗೆ ಬಿಎಲ್‌ಓಗಳು 1,46,846 (ಶೇ.06.91) ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆ ಪಡೆದು ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್



ಮಾಡಿದ್ದಾರೆ. ಇನ್ನು 5,080 (ಶೇ.0.21) ಮತದಾರರು ಸ್ವಯಂ ಪ್ರೇರಿತವಾಗಿ ಆನ್ ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಬಿಎಲ್‌ಓಗಳು ಮನೆ-ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 1,282 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು ಮತ್ತು 1,751 ಜನ ಮತದಾರರು ನಿಧನ ಹೊಂದಿರುವ ಬಗ್ಗೆ ವರದಿಯಾಗಿದೆ.

ಒಂದನೇಯ ಪುಟದಿಂದ

ಗುರಿ ಸಾಧಿಸಲು ನಿರಂತರ ಪ್ರಯತ್ನ ಅಗತ್ಯ: ಡಾ. ನಾಗಲಕ್ಷ್ಮೀ ಚೌಧರಿ

ಸಮರ್ಪಕವಾಗಿ ಬಳಸಿಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ತಿಳಿಸಿದರು.

ಸಂವಾದದ ವೇಳೆ ಗ್ರಾಮುಗಳಿಗೆ ಸಮರ್ಪಕ ಬಸ್ ಸೌಲಭ್ಯ ಇಲ್ಲದ ಕಾರಣ ಕಾಲೇಜಿಗೆ ನಡೆದುಕೊಂಡು ಬರಬೇಕಾಗುತ್ತದೆ ಎಂದು ಕೆಲ ವಿದ್ಯಾರ್ಥಿನಿಯರು ಅಧ್ಯಕ್ಷೆಯ ಗಮನಕ್ಕೆ ತಂದರು.

ಗಂಟೆಗೂ ಹೆಚ್ಚು ಕಾಲ ನಡೆದ ಸಂವಾದದಲ್ಲಿ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಆತ್ಮೀಯವಾಗಿ ಉತ್ತರಿಸಿದ ಅಧ್ಯಕ್ಷೆ, ಕೊನೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಸೆಲ್ಫಿ ತೆಗೆದುಕೊಂಡು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶರಣಮ್ಮ, ಕಾಲೇಜಿನ ಪ್ರಾಚಾರ್ಯ ಡಾ. ಯಂಕಣ್ಣ, ಪರಿಸರ ಪ್ರೇಮಿ ಈರಣ್ಣ ಕೋಸಗಿ, ಸಹಾಯಕ ಪ್ರಾಧ್ಯಾಪಕರಾದ ಡಾ. ಸಂತೋಷ ಕುಮಾರ್, ಮಹದೇವಪ್ಪ, ಇಲಾಖೆಯ ನಿರೂಪಣಾಧಿಕಾರಿ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಆರೆಸ್ಸೆಸ್ ಕಡ್ಡಾಯ ನೋಂದಣಿಗೆ ಆಗ್ರಹಿಸಿ ಪ್ರತಿಭಟನೆ

ಕಲಬುರಗಿ,ಜು.10-

ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರೆಸ್ಸೆಸ್) ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು, ಹಣಕಾಸು ವ್ಯವಹಾರಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಹಾಗೂ ಎಲ್ಲಾ ಸಂಘಟನೆಗಳಿಗೆ ಒಂದೇ ರೀತಿಯ ಕಾನೂನು ನಿಯಮಗಳು ಅನ್ವಯವಾಗಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿ ಸೇರಿದಂತೆ ವಿವಿಧ ಪ್ರಗತಿ ಪರ ಸಂಘಟನೆಗಳ ನೇತೃತ್ವದಲ್ಲಿ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಯಿತು.



ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಲಚ್ಚಪ್ಪ ಎಸ್. ಜಮಾದಾರ ಅವರ ನೇತೃತ್ವದಲ್ಲಿ ಎಸ್‌ವಿಪಿ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಲಚ್ಚಪ್ಪ ಎಸ್. ಜಮಾದಾರ, ಸಾರ್ವಜನಿಕರಿಂದ ದೇಣಿಗೆ ಸ್ವೀಕರಿಸುವ ಎಲ್ಲಾ ಸಂಘ- ಸಂಸ್ಥೆಗಳು, ಟ್ರಸ್ಟ್‌ಗಳು ಹಾಗೂ ಸರ್ಕಾರೇತರ ಸಂಸ್ಥೆಗಳಂತೆ ಆರೆಸ್ಸೆಸ್ ಕೂಡ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡು, ತನ್ನ ಹಣಕಾಸು ವ್ಯವಹಾರಗಳ ಲೆಕ್ಕಪತ್ರಗಳನ್ನು ಪಾರದರ್ಶಕವಾಗಿ ನಿರ್ವಹಿಸಬೇಕು ಎಂದು ಒತ್ತಾಯಿಸಿದರು. ದೇಶದ ಎಲ್ಲಾ ಸಂಘಟನೆಗಳಿಗೆ ಒಂದೇ ರೀತಿಯ ನೋಂದಣಿ, ಲೆಕ್ಕ ಪರಿಶೋಧನೆ ಹಾಗೂ ಹಣಕಾಸು ಮಾಹಿತಿ ಬಹಿರಂಗಪಡಿಸುವ ನಿಯಮಗಳನ್ನು ಸಮಾನವಾಗಿ ಜಾರಿಗೊಳಿಸಬೇಕು ಎಂದು ಅವರು ಆಗ್ರಹಿಸಿ ದರು.

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರೆಸ್ಸೆಸ್‌ನ ನೋಂದಣಿ ಕುರಿತು ಎತ್ತಿರುವ ಪ್ರಶ್ನೆ ನ್ಯಾಯಸಮ್ಮತವಾಗಿದೆ ಎಂದು ಹೇಳಿದ ಅವರು, ಸಚಿವರಿಗೆ ಬೆದರಿಕೆ ಹಾಕಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅವರ ಭದ್ರತೆಯನ್ನು ಬಲಪಡಿಸಬೇಕು ಎಂದು ಒತ್ತಾಯಿಸಿದರು.

ಮನವಿಯಲ್ಲಿ ಆರೆಸ್ಸೆಸ್‌ನ ಕಡ್ಡಾಯ ನೋಂದಣಿ, ನೋಂದಣಿಯಿಲ್ಲದೆ ಸಂಘಟನೆ ಚಟುವಟಿಕೆ ನಡೆಸದಂತೆ ಕ್ರಮ ಕೈಗೊಳ್ಳುವುದು ಹಾಗೂ ಹಣಕಾಸು ಪಾರದರ್ಶಕತೆ ಕುರಿತ ನಿಯಮಗಳನ್ನು ಎಲ್ಲ ಸಂಘಟನೆಗಳಿಗೂ ಸಮಾನವಾಗಿ ಜಾರಿಗೊಳಿಸುವಂತೆ ಸರ್ಕಾರವನ್ನು ಆಗ್ರಹಿಸಲಾಗಿದೆ.

ಪ್ರತಿಭಟನೆಯಲ್ಲಿ ಭೀಮಶಾ ಖನ್ನಾ, ರಾಮಲಿಂಗ ಬಾನರೋ, ಹಣಮಂತ ಸಂಕನೂರ್ ಬಸವರಾಜ ಚಿನಮಳ್ಳಿ, ಮಲ್ಲಿಕಾರ್ಜುನ ಗುಡ್ಡಾ, ಪರಮೇಶ್ವರ ಅಷ್ಟಂದ, ಸತೀಶ ಜಮಾದಾರ, ಉಮೇಶ ಕುರಿಕೋಟ, ಅಭಿಷೇಕ್ ಉಪಾಧ್ಯಾಯ, ಮತೀನ್ ಪಟೇಲ್, ವಿಜಯ, ಮಡಿವಾಳಪ್ಪ ಕಟ್ಟಿಮನಿ, ಅರುಣಕುಮಾರ ಇನಾಮದಾರ್, ರಾಮು ಉಮ್ಮರಗಿ, ರಾಣು ಮುದ್ದಣಕರ್ ಅಂಬಾರಾಯ ಜವಳಗಾ, ರಾಮು ರಾಠೋಡ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ರಾಜಕೀಯ ಮುಖಂಡರ ಸಭೆ

ಸಿರುಗುಪ್ಪ- ಮತಗಟ್ಟೆ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಮತದಾರರ ಪಟ್ಟಿಯ



ಮಾಹಿತಿಯ ಗಣತಿ ನಮೂನೆ ನೀಡಲಿದ್ದು ಮತದಾರರು ಕಡ್ಡಾಯವಾಗಿ ನಮೂನೆಯನ್ನು ಭರ್ತಿ ಮಾಡಿ ಅಧಿಕಾರಿಗಳಿಗೆ ನೀಡಬೇಕಿದೆ ನಮೂನೆಯ ದ್ವಿಪ್ರತಿಯನ್ನು ನೀಡಲಿದ್ದು ಒಂದು ಪ್ರತಿಯನ್ನು ಸ್ವೀಕೃತಿಯಾಗಿ ಮತದಾರರು ತಮ್ಮಲ್ಲೇ ಉಳಿಸಿಕೊಳ್ಳಬೇಕು 18 ವರ್ಷ ಮೇಲ್ಪಟ್ಟವರು ಮನೆಯ ಮುಖ್ಯಸ್ಥರು ನಮೂನೆಗೆ ಸಹಿ ಮಾಡಬಹುದಾಗಿದೆ ಬಿ ಎಲ್ ಓಗಳು ಪ್ರತಿ ಮತದಾರರ ಮನೆಗೆ ಮೂರು ಬಾರಿ ಭೇಟಿ ಮಾಡಲಿದ್ದಾರೆ ಎಂದು ಮತದಾರರ ನೋಂದಣಿ ಅಧಿಕಾರಿ ಸೋಮ ಸುಂದರಮ್ ಹೇಳಿದರು.

ನಗರದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ಮತದಾರರ ಪಟ್ಟಿ ಪರಿಷ್ಕರಣೆಯ ಕುರಿತು ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು ಸಿರುಗುಪ್ಪ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,28,277 ಮತದಾರರು ಇದ್ದು ಇಲ್ಲಿಯವರೆಗೆ 2,23,867 ಮತದಾರರಿಗೆ ಎನ್ಯುಮರೇಷನ್ ಫಾರಂ ಗಳನ್ನು ವಿತರಿಸಲಾಗಿದ್ದು ಶೇ. 98%, 31% ರಷ್ಟು ಸಾಧನೆಯಾಗಿದೆ ಇದರಲ್ಲಿ ತಂತ್ರಜ್ಞಾನದಲ್ಲಿ ಇಲ್ಲಿಯವರೆಗೆ 57,923 ಅಳವಡಿಸಲಾಗಿದೆ ಮತ ಪಟ್ಟಿಯಲ್ಲಿ ಗುರುತಿಸಲಾದ 642 ಮತದಾರರಲ್ಲಿ ಮತದಾರರ ಪಟ್ಟಿಯಲ್ಲಿ ಇರಲಾರದವರು 4 ಜನ ಬೇರೆ ಕಡೆ ಸ್ಥಳಾಂತರವಾದವರು 250 ಜನ ಮರಣ ಹೊಂದಿದವರು 263 ಜನ ಮತದಾರರ ಪಟ್ಟಿಯಲ್ಲಿ ಎರಡು ಕಡೆ ನೋಂದಣಿ ಆದವರು 84 ಜನ ಇತರೆ 6 ಜನ ಒಟ್ಟು 642 ಮತದಾರರನ್ನು ಗುರುತಿಸಲಾಗಿದೆ ಎಂದು ತಿಳಿಸಿದರು ಸಹಾಯಕ ಚುನಾವಣಾ ಅಧಿಕಾರಿ ತಹಶೀಲ್ದಾರ್ ಗೌಸಿಯಾ ಬೇಗಂ ಮುಖಂಡರಾದ ಬಿಜೆಪಿ ಜಿಲ್ಲಾ ಘಟಕದ ಉಪಾಧ್ಯಕ್ಷ ದೊಡ್ಡ ಹುಲುಗಪ್ಪ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎನ್.ಕರಿಬಸಪ್ಪ ಜೆಡಿಎಸ್ ತಾಲೂಕು ಅಧ್ಯಕ್ಷ ಶಿವನಾರಾಯಣ ಚುನಾವಣಾ ಸಿಬ್ಬಂದಿಗಳಾದ ನವೀನ್ ಮಹಾಂತೇಶ ಇದ್ದರು.

ಮಾದಕ ವ್ಯಸನದಿಂದ ದೂರವಿದ್ದು ಉತ್ತಮ ಬದುಕು ರೂಪಿಸಿಕೊಳ್ಳಿ: ಮುಹಮ್ಮದ್ ಖಾಸಿಂ



ಸಿರುಗುಪ್ಪ,ಜು.10-

ಮಾದಕ ದ್ರವ್ಯದ ವ್ಯಸನವು ಯುವಜನರ ಆರೋಗ್ಯ, ಶಿಕ್ಷಣ ಹಾಗೂ ಭವಿಷ್ಯವನ್ನು ಹಾಳು ಮಾಡುತ್ತಿರುವ ಗಂಭೀರ ಸಮಸ್ಯೆಯಾಗಿದ್ದು, ಯುವ ಸಮುದಾಯ ದುಶ್ಚಟಗಳಿಂದ ದೂರವಿದ್ದು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸಿಂ ಕರೆ ನೀಡಿದರು.

ನಗರದ ಬಸವೇಶ್ವರ ಪದವಿ ಕಾಲೇಜಿನಲ್ಲಿ ಗುರುವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ಅಕ್ರಮ ಸಾಗಣೆ ತಡೆ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಹದಿಹರೆಯದವರು ಮತ್ತು ಯುವಕರು ವಿವಿಧ ಕಾರಣಗಳಿಂದ ಮಾದಕ ವ್ಯಸನಕ್ಕೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಮಾದಕ ದ್ರವ್ಯ ಸೇವನೆಯು ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಜೀವನದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತದೆ. ಈ ಹಿನ್ನೆಲೆಯಲ್ಲಿ ಪ್ರತಿ ವರ್ಷ ಜೂನ್ 26ರಂದು ವಿಶ್ವದಾದ್ಯಂತ ಅಂತರರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ಅಕ್ರಮ ಸಾಗಣೆ ತಡೆ ದಿನ ಆಚರಿಸಲಾಗುತ್ತದೆ ಎಂದು ತಿಳಿಸಿದರು. ಮಾದಕ ವ್ಯಸನದಿಂದ ಹಸಿವು ಕಡಿಮೆಯಾಗುವುದು, ತೂಕ ಇಳಿಕೆಯಾಗುವುದು, ಆತಂಕ, ನಿದ್ರಾಹೀನತೆ, ಮಾನಸಿಕ ಅಸ್ವಸ್ಥತೆ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ. ಭಾರತದಲ್ಲಿ ಮಾದಕ ದ್ರವ್ಯ ಮತ್ತು ಅಕ್ರಮ ಸಾಗಣೆ ತಡೆಗೆ ಕಠಿಣ ಕಾನೂನುಗಳಿದ್ದು, ಸಮಾಜದ ಸಹಕಾರದಿಂದ ಮಾತ್ರ ವ್ಯಸನಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಆಪ್ತ ಸಮಾಲೋಚಕ ಮಲ್ಲೇಶಪ್ಪ ಮಾತನಾಡಿ, ಮಾದಕ ವ್ಯಸನಕ್ಕೆ ಒಳಗಾದವರನ್ನು ವ್ಯಸನಮುಕ್ತ ಕೇಂದ್ರಗಳಿಗೆ ದಾಖಲಿಸಿ ಚಿಕಿತ್ಸೆ ಹಾಗೂ ಸಮಾಲೋಚನೆ ಪಡೆಯುವಂತೆ ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಸಿ. ದಾದಾಪೀರ್ ಮಾತನಾಡಿ, ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಶಿಕ್ಷಣಕ್ಕೆ ಆದ್ಯತೆ ನೀಡಿ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮಾತೃವಂದನಾ ಯೋಜನೆ ಪರಿಣಾಮಕಾರಿ ಜಾರಿಗೆ ಅಧಿಕಾರಿಗಳಿಗೆ ತರಬೇತಿ



ಕಲಬುರಗಿ,ಜು.10-

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ ನೀಡುವುದು ಅಗತ್ಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ಹೇಳಿದರು.

ನಗರದ ಸರ್ಕಾರಿ ಬಾಲಕಿಯರ ಬಾಲ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಅಧಿಕಾರಿಗಳು ಮತ್ತು ಸಿಬ್ಬಂದಿ ತರಬೇತಿಯ ಸದುಪಯೋಗ ಪಡೆದು ಫಲಾನುಭವಿಗಳಿಗೆ ಪರಿಣಾಮಕಾರಿ ಸೇವೆ ಒದಗಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ನಿರೂಪಣಾಧಿಕಾರಿ ಮುರುಗೇಶ ಗುಣಾರಿ ಮಾತನಾಡಿ, ಯೋಜನೆಯ ಅನುಷ್ಠಾನದಲ್ಲಿ ಹಲವು ತಾಂತ್ರಿಕ ಸಮಸ್ಯೆಗಳಿದ್ದು, ಅವುಗಳ ಕುರಿತು ಸಂಪೂರ್ಣ ಮಾಹಿತಿ ಪಡೆದು ಸಮಸ್ಯೆಗಳನ್ನು ನಿವಾರಿಸಿಕೊಳ್ಳುವಂತೆ ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಮಾತನಾಡಿ, ರಾಜ್ಯ ಮಟ್ಟದಲ್ಲಿ ತರಬೇತಿ ಪಡೆದ ಮಾಸ್ಟರ್ ಟ್ರೇನರ್‌ಗಳ ಮೂಲಕ ಈ ಕಾರ್ಯಾಗಾರ ನಡೆಸಲಾಗುತ್ತಿದ್ದು, ಇದರಿಂದ ಅಧಿಕಾರಿಗಳ ಕಾರ್ಯಕ್ಷಮತೆ ಹೆಚ್ಚಲು ನೆರವಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು, ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಬೆಂಗಳೂರಿನ ಐಪಿಇ ಗ್ಲೋಬಲ್ ಸಂಸ್ಥೆಯ ಸ್ಟೇಟ್ ಪ್ರೋಗ್ರಾಮ್ ಮ್ಯಾನೇಜರ್ ಆಬೇದ ಅಹ್ಮದ್, ಪಿಎಮ್ಎಮ್‌ವಿವೈ ಸ್ಪೇಷಾಲಿಸ್ಟ್ ರಾಹುಲ್ ಮಹಾದೇವ, ಟ್ರೇನಿಂಗ್ ಆಂಡ್ ಕಮ್ಯೂನಿಕೇಷನ್ಸ್ ಎಕ್ಸ್‌ಪರ್ಟ್ ಅಡಿವೆಪ್ಪಗೌಡ ಹಾದಿಮನಿ, ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಹಿರಿಯ ಮೇಲ್ವಿಚಾರಕಿಯರು, ವಲಯ ಮೇಲ್ವಿಚಾರಕಿಯರು, ತಾಲೂಕು ಪೋಷಣ ಸಂಯೋಜಕರು, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಸಿಬ್ಬಂದಿಗಳು, ಚಿಗುರು ಯೋಜನೆಯ ಡಿಸ್ಟ್ರಿಕ್ಟ್ ಸಪೋರ್ಟ್ ಮ್ಯಾನೇಜರ್ 9 ಯೋಜನೆಗಳ ಇಂಪ್ಲಿಮೆಂಟಿಗ್ ಸಪೋರ್ಟಿಂಗ್ ಆಫೀಸರ್‌ಗಳು ಉಪಸ್ಥಿತರಿದ್ದರು.

ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ರಂಗೋಲಿಯಲ್ಲಿ ಅರಳಿದ ಮತದಾರರ ಜಾಗೃತಿ ಸಂದೇಶಗಳು




ಸಿರುಗುಪ್ಪ - ತಾಲೂಕು ಪಂಚಾಯಿತಿ ಆವರಣದಲ್ಲಿ ಬುಧವಾರ ನಡೆದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಎಸ್‌ಐಆರ್ ಜಾಗೃತಿ ಅಂಗವಾಗಿ ಆಯೋಜಿಸಿದ್ದ ರಂಗೋಲಿ ಸ್ಪರ್ಧೆಯಲ್ಲಿ ಮಹಿಳೆಯರು ಮತದಾನ ಜಾಗೃತಿ ಸಂದೇಶಗಳನ್ನು ರಂಗೋಲಿಯಲ್ಲಿ ಮೂಡಿಸಿದರು

ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ಹಾಗೂ ಒಬ್ಬನೇ ಮತದಾರ ಹಲವು ಕ್ಷೇತ್ರಗಳಲ್ಲಿ ಹೆಸರು ನೋಂದಾಯಿಸುವುದನ್ನು ತಡೆಯುವುದೇ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಮುಖ್ಯ ಉದ್ದೇಶ ಎಂದು ತಾ.ಪಂ. ಇಓ ಪವನ್ ಕುಮಾರ್ ಎಸ್. ದಂಡಪ್ಪನವರ್ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂ ಕು ಪಂಚಾಯಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬುಧವಾರ ಆಯೋಜಿಸಿದ್ದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಅಂಗವಾಗಿ ನಡೆದ ರಂಗೋಲಿ ಸ್ಪರ್ಧೆ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು ಮತಗಟ್ಟೆ ಮಟ್ಟದ ಅಧಿಕಾರಿಗಳು ಬಿ ಎಲ್ ಓ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ನಮೂನೆಗಳನ್ನು ವಿತರಿಸಲಿದ್ದು ಸಾರ್ವಜನಿಕರು ಅವುಗಳನ್ನು ನಿಖರ ಮಾಹಿತಿಯೊಂದಿಗೆ ಭರ್ತಿ ಮಾಡಿ ಸಲ್ಲಿಸಬೇಕು ಎಂದು ಮನವಿ ಮಾಡಿದರು ಪರಿಷ್ಕರಣೆ ಕಾರ್ಯ ಜುಲೈ 29ರವರೆಗೆ ನಡೆಯಲಿದ್ದು, ನಂತರ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು. ರಂಗೋಲಿ ಸ್ಪರ್ಧೆಯಲ್ಲಿ ಸ್ವಸಹಾಯ ಸಂಘಗಳ ಮಹಿಳೆಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಉತ್ಸಾಹದಿಂದ ಪಾಲ್ಗೊಂಡಿದ್ದರು. ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಸಂದೇಶಗಳು ಲಾಂಛನಗಳು ಮತ್ತು ಮತದಾನದ ಮಹತ್ವ ಸಾರುವ ಕಲಾಕೃತಿಗಳು ರಂಗೋಲಿಯಲ್ಲಿ ಮೂಡಿ ಗಮನ ಸೆಳೆದವು ಕಾರ್ಯಕ್ರಮದಲ್ಲಿ ಸಿಡಿಪಿಓ ಪ್ರದೀಪ್ ಕುಮಾರ್ ಉಪಸ್ಥಿತರಿದ್ದರು

ಬಸ್ ಸೌಲಭ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ



ಅಫಜಲಪುರ ,ಜು.10-

ತಾಲೂಕಿನ ಹಾವಳಗಾ ಹಾಗೂ ಕೊಳ್ಳೂರ ಗ್ರಾಮಗಳಿಂದ ಘತ್ತರಗಿ ಸರ್ಕಾರಿ ಪ್ರೌಢಶಾಲೆಗೆ ತೆರಳುವ ವಿದ್ಯಾರ್ಥಿಗಳಿಗೆ ಸಾರಿಗೆ ಬಸ್ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ, ರಸ್ತೆ ಬದಿಯ ಜಾಲಿ ಕಂಟಿ ಮತ್ತು ಗಿಡಗಂಟಿಗಳನ್ನು ತೆರವುಗೊಳಿಸಿ ಬಸ್ ಸಂಚಾರ ಆರಂಭಿಸಬೇಕೆಂದು ಒತ್ತಾಯಿಸಿ ವಿದ್ಯಾರ್ಥಿಗಳು ಗುರುವಾರ ತಾಲೂಕು ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಹಾವಳಗಾಘತ್ತರಗಿ ರಸ್ತೆಯ ಎರಡೂ ಬದಿಗಳಲ್ಲಿ ದಟ್ಟವಾಗಿ ಬೆಳೆದಿರುವ ಮುಳ್ಳು ಕಂಟಿ ಮತ್ತು ಗಿಡಗಂಟಿಗಳಿಂದ ರಸ್ತೆ ಇಕ್ಕಟ್ಟಾಗಿದ್ದು, ಬಸ್ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿದೆ. ಇದರಿಂದ ಸಾರಿಗೆ ಬಸ್ ಚಾಲಕರು ಸಂಚಾರ ನಡೆಸಲು ಹಿಂದೇಟು ಹಾಕುತ್ತಿದ್ದು, ವಿದ್ಯಾರ್ಥಿಗಳು ಪ್ರತಿದಿನ ಹಲವು ಕಿಲೋಮೀಟರ್ ಕಾಲ್ನಡಿಗೆಯಲ್ಲೇ ಶಾಲೆಗೆ ತೆರಳುವ ಪರಿಸ್ಥಿತಿ ಎದುರಿಸುತ್ತಿದ್ದಾರೆ ಎಂದು ವಿದ್ಯಾರ್ಥಿಗಳು ದೂರಿದರು.

ಈ ಕುರಿತು ಗ್ರಾಮ ಪಂಚಾಯಿತಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ''ಎರಡು ದಿನಗಳಲ್ಲಿ ಗಿಡಗಂಟಿ ತೆರವುಗೊಳಿಸಲಾಗುವುದು'' ಎಂಬ ಭರವಸೆ ನೀಡುವುದನ್ನು ಹೊರತುಪಡಿಸಿ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಮಳೆಗಾಲದಲ್ಲಿ ಕಾಲ್ನಡಿಗೆಯಲ್ಲಿ ಶಾಲೆಗೆ ತೆರಳುವುದು ಅಪಾಯಕಾರಿಯಾಗಿದ್ದು, ವಿದ್ಯಾರ್ಥಿಗಳ ಸುರಕ್ಷತೆಗೆ ಧಕ್ಕೆಯಾಗುತ್ತಿದೆ. ಆದ್ದರಿಂದ ರಸ್ತೆ ಬದಿಯ ಗಿಡಗಂಟಿ ಹಾಗೂ ಮುಳ್ಳು ಕಂಟಿಗಳನ್ನು ತಕ್ಷಣ ತೆರವುಗೊಳಿಸಿ, ಬಸ್ ಸಂಚಾರವನ್ನು ಪುನರಾರಂಭಿಸಬೇಕು. ಅಲ್ಲಿಯವರೆಗೆ ಹೋರಾಟ ಮುಂದುವರಿಸುವುದಾಗಿ ವಿದ್ಯಾರ್ಥಿಗಳು ಎಚ್ಚರಿಕೆ ನೀಡಿದರು.

ಪ್ರತಿಭಟನೆಗೆ ಬೆಂಬಲ ಸೂಚಿಸಿದ ಹೋರಾಟಗಾರರಾದ ಸಾಗರ ಇಸ್ಪೂರ್, ಶ್ರೀಮಂತ ಬಿರಾದಾರ್ ಹಾಗೂ ನಾಮದೇವ ಕಡಕೋಳ, ವಿದ್ಯಾರ್ಥಿಗಳ ಶಿಕ್ಷಣ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ರಸ್ತೆ ಸ್ವಚ್ಛಗೊಳಿಸಿ ಬಸ್ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಬಳಿಕ ವಿದ್ಯಾರ್ಥಿಗಳ ಮನವಿಯನ್ನು ಸ್ವೀಕರಿಸಿದ ತಾಲೂಕು ಪಂಚಾಯಿತಿ ಸಿಬ್ಬಂದಿ, ವಿಷಯವನ್ನು ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಭರವಸೆಯ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ಹಿಂತೆಗೆದುಕೊಂಡರು.

11 ರಂದು ರಾಷ್ಟ್ರಿಯ ಲೋಕ್ ಅದಾಲತ್

ಬಳ್ಳಾರಿ,ಜು.10-

ರಾಷ್ಟ್ರಿಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 11 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರಿಯ ಲೋಕ್ ಅದಾಲತ್ ನಡೆಯಲಿದೆ.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಲಯದಲ್ಲಿ ನಡೆಯುವ ರಾಷ್ಟ್ರಿಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶ ಕಲ್ಪಿಸಿದ್ದು, ಸಾರ್ವಜನಿಕರು, ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳುವುದರ ಮೂಲಕ ತಮ್ಮ ವಿವಾದಗಳನ್ನು ಅಂತ್ಯಗೊಳಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392-278077 ಸಹಾಯವಾಣಿ ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಸಿದ್ದಲಿಂಗ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ: 2,03,410 ಎಸ್‌ಐಆರ್‌ಗಣತಿ ನಮೂನೆ ವಿತರಣೆ

ಬಳ್ಳಾರಿ,ಜು.10-

94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ನಡೆಯುತ್ತಿದ್ದು, ಮತದಾರರಿಗೆ ಗಣತಿ ಅರ್ಜಿಗಳನ್ನು ವಿತರಿಸಲು ಬಿ.ಎಲ್.ಓ ಗಳ ಮೂಲಕ ಮನೆ ಮನೆ ಭೇಟಿ ನೀಡುತ್ತಿದ್ದಾರೆ. ಒಟ್ಟು 2,79,144 ಮತದಾರರಿದ್ದು, ಬುಧವಾರಕ್ಕೆ 2,03,410 (ಶೇ. 72.87) ಎಸ್‌ಐಆರ್ ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈ ಮನೆ ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ನಡೆಯಲಿದೆ. ಈಗಾಗಲೇ ಶೇ.98.01 ರಷ್ಟು ಮತದಾರರನ್ನು ಮ್ಯಾಪ್ ಮಾಡಲಾಗಿದೆ. 15,033 (ಶೇ. 5.39) ಅರ್ಜಿಗಳು ಡಿಜಿಟಲೀಕರಣಗೊಂಡಿವೆ. 664 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸರಕಾರ ಮಾಡಲಿಲ್ಲದ ಅಭಿರುದ್ಧಿ ಟಿಪ್ಪು ಸುಲ್ತಾನ್ ಯುವ ವೇದಿಕೆ ಮಾಡಿದೆ



ಹಾವೇರಿ,ಜು.10- ರಾಜ್ಯದ ಯಾವುದೇ ಗ್ರಾಮದಲ್ಲಿ ಖಬರಸ್ಥಾನ ಅಭಿವೃದ್ಧಿಪಡಿಸುವುದೆ ನಮ್ಮ ಅಭಿಪ್ರಾಯವಾಗಿದೆ ಎಂದು ಟಿಪ್ಪು ಸುಲ್ತಾನ್ ಯುವ ವೇದಿಕೆ ಪ್ರಧಾನಕಾರ್ಯದರ್ಶಿ ಹಬಿಬುಲ್ಲಾ ಹೇಳಿದರು.

ಹೌದು ಹಾವೇರಿ ಜಿಲ್ಲೆ ಕನವಳ್ಳಿ ಗ್ರಾಮದ ಮುಸ್ಲಿಂ ಖಬರಸ್ಥಾನದಲ್ಲಿ ಟೈಲ್ಸ್ ಫ್ಲವರ್ ಹಚ್ಚಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು ಅಭಿವೃದ್ಧಿ ಮಾಡೋದು ನೋಡಿದರೆ ಕರ್ನಾಟಕ ರಾಜ್ಯದಲ್ಲಿ ಹೊಸ ಸಂಚಲನ ಮೂಡಿದೆ ಎಂದು ಜಮಾತ ರಜಾ ಮುಸ್ತಫಾ ಕಮಿಟಿ ಅಧ್ಯಕ್ಷ ಸಂತೋಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ

ಮುಸ್ಲಿಂ ಕನವಳ್ಳಿ ಗ್ರಾಮದ ನೌಜವಾನ್ ಕಮಿಟಿ ಹಾಗೂ ಅಂಜುಮನ್ ಕಮಿಟಿ ಜಮಾತ್ ರಜಾ ಮುಸ್ತಫ ಕಮಿಟಿ ಗ್ರಾಮದ ಗುರುಹಿರಿಯರು ಉಪಸಿದ್ಧರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಜಾತಿ ಗಣತಿ ಇನ್ನಾದರೂ ಮಂಡನೆಯಾಗಲಿ

ರಾಜ್ಯದಲ್ಲಿ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ವರದಿ ಮತ್ತೆ ಸದ್ದು ಮಾಡುತ್ತಿದೆ. ವರದಿಯನ್ನು ಅಧಿವೇಶನದಲ್ಲಿ ಮಂಡಿಸಿ ಚರ್ಚೆ ನಡೆಸಿ ಎಂದು ಈ ಬಾರಿ ಬಿಜೆಪಿ ಮುಖಂಡರೇ ಬೀದಿಗಿಳಿದಿದ್ದಾರೆ. ವರದಿಯ ಕುರಿತಂತೆ ರಾಜ್ಯ ಸರಕಾರ ತನ್ನ ನಿಲುವನ್ನು ಪ್ರಕಟ ಮಾಡಬೇಕು. ಮುಂದಿನ ಅಧಿವೇಶನದಲ್ಲಿ ಅದನ್ನು ಮಂಡಿಸಬೇಕು ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ವಿ. ಸುನೀಲ್ ಕುಮಾರ್ ಅವರು ಮಾಧ್ಯಮಗಳ ಮುಂದೆ ಆಗ್ರಹಿಸಿದ್ದಾರೆ. 450 ಕೋಟಿ ರೂ.ಗಳಿಗೂ ಹೆಚ್ಚು ಜನರ ತೆರಿಗೆಯನ್ನು ವೆಚ್ಚ ಮಾಡಿ ನಡೆಸಲಾದ ಸಮೀಕ್ಷೆಯ ಬಗ್ಗೆ ಚರ್ಚೆಗೆ ಸಿದ್ಧರಿದ್ದೇವೆ. ಅಧಿವೇಶನದಲ್ಲಿ ಅದಕ್ಕಾಗಿ ಪ್ರತ್ಯೇಕ ಸಮಯ ನಿಗದಿ ಪಡಿಸಬೇಕು. ವರದಿಯಲ್ಲಿ ಏನಿದೆ ಎಂದು ತಿಳಿಯಲು ನಾವು ಬಯಸಿದ್ದೇವೆ ಎಂದು ಅವರು ಒತ್ತಾಯಿಸಿದ್ದಾರೆ. ಒಂದು ಕಾಲದಲ್ಲಿ ಇದೇ ಬಿಜೆಪಿಯು ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯ ಮೂಲಕ ಕಾಂಗ್ರೆಸ್ ಸರಕಾರವು ಹಿಂದೂ ಧರ್ಮದಲ್ಲಿ ಒಡಕನ್ನುಂಟು ಮಾಡಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿತ್ತು. ಈ ಸಮೀಕ್ಷೆ ಅಥವಾ ಜಾತಿ ಗಣತಿಯನ್ನು ಯಾವ ಕಾರಣಕ್ಕೂ ಜಾರಿಗೊಳಿಸಲು ಬಿಡುವುದಿಲ್ಲ ಎಂದು ಬಿಜೆಪಿ ಮುಖಂಡರು ಎಚ್ಚರಿಕೆ ನೀಡಿದ್ದರು. ಕಳೆದ ಹತ್ತು ವರ್ಷಗಳಿಂದ ಜಾತಿ ಗಣತಿ ವರದಿಯನ್ನು ಸರಕಾರ ಸ್ವೀಕರಿಸದೇ ಇರುವುದಕ್ಕೆ ಬಿಜೆಪಿಯ ಕೊಡುಗೆಯೂ ಸಾಕಷ್ಟಿದೆ. ಬೇರೆ ಬೇರೆ ನೆಪಗಳನ್ನು ಮುಂದಿಟ್ಟುಕೊಂಡು ಈ ಹಿಂದಿನ ಸಮೀಕ್ಷೆಯನ್ನು ಬಿಜೆಪಿ ವಿರೋಧಿಸಿತ್ತು. ಕಟ್ಟ ಕಡೆಗೆ ತಾನೇ ನಡೆಸಿದ ಸಮೀಕ್ಷೆಯನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಕಸದ ಬುಟ್ಟಿಗೆ ಹಾಕಿ, ಮತ್ತೆ ಹೊಸದಾಗಿ ಸಮೀಕ್ಷೆ ಕಾರ್ಯಕ್ಕೆ ಮುಂದಾಗಬೇಕಾಯಿತು. ಕಳೆದ ಮೇ ತಿಂಗಳಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್ ಅವರಿಂದ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವರದಿಯನ್ನು ಅಧಿಕೃತವಾಗಿ ಸ್ವೀಕರಿಸಿದ್ದರು. ಆದರೆ ಅದನ್ನು ಜಾರಿಗೊಳಿಸುವ ಬಗ್ಗೆ ಈವರೆಗೆ ಸರಕಾರ ಯಾವುದೇ ಕ್ರಮವನ್ನು ತೆಗೆದುಕೊಂಡಿಲ್ಲ.



ವರದಿ ಜಾರಿಗೊಳಿಸುವಲ್ಲಿ ಸರಕಾರದ ಮುಂದಿರುವ ಪ್ರಮುಖ ತಡೆಯೊಂದು ನಿವಾರಣೆಯಾದಂತಾಗಿದೆ. ವರದಿಯ ಬಗ್ಗೆ ಆಕ್ಷೇಪಗಳನ್ನು ವ್ಯಕ್ತಪಡಿಸುತ್ತಿದ್ದ ವಿರೋಧ ಪಕ್ಷಗಳೇ ವರದಿ ಜಾರಿಗೊಳಿಸಲು ಒತ್ತಾಯಿಸುತ್ತಿರುವುದರಿಂದ ಸರಕಾರ ಹಿಂಜರಿಯುವ ಅಗತ್ಯವಿಲ್ಲ. ಆದರೆ, ಬಿಜೆಪಿ ಈ ವರದಿಯನ್ನು ಜಾರಿಗೊಳಿಸಲು ಯಾಕೆ ಒತ್ತಾಯಿಸುತ್ತಿದೆ ಎನ್ನುವುದು ಗೊತ್ತಿಲ್ಲದೇ ಇರುವುದೇನೂ ಅಲ್ಲ. ಸರಕಾರದೊಳಗೇ ಈ ವರದಿಯ ಬಗ್ಗೆ ಬಿನ್ನಾಭಿಪ್ರಾಯಗಳಿರುವುದು, ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯಗಳ ಮುಖಂಡರು ಈ ವರದಿಯ ಬಗ್ಗೆ ತಮ್ಮ ಆಕ್ಷೇಪಗಳನ್ನು ವ್ಯಕ್ತಪಡಿಸುತ್ತಿರುವುದು ಭವಿಷ್ಯದಲ್ಲಿ ಸರಕಾರಕ್ಕೆ ತಲೆನೋವಾಗಿ ಪರಿಣಮಿಸಬಹುದು. ವಿವಿಧ ಜಾತಿ, ಸಮುದಾಯಗಳು ಈ ವರದಿಯನ್ನು ಮುಂದಿಟ್ಟುಕೊಂಡು ಸರಕಾರವನ್ನು ತರಾಟೆಗೆ ತೆಗೆದುಕೊಳ್ಳಲಿದೆ ಎನ್ನುವ ನಿರೀಕ್ಷೆಯಿಂದ ಬಿಜೆಪಿ ಈ ವರದಿಯನ್ನು ಮಂಡಿಸಿ ಚರ್ಚಿಸುವುದಕ್ಕೆ ಒತ್ತಾಯಿಸುತ್ತಿದೆ. ಬೇರೆ ಬೇರೆ ಜಾತಿ ಸಮುದಾಯಗಳನ್ನು ಸರಕಾರದ ವಿರುದ್ಧ ಎತ್ತಿ ಕಟ್ಟುವುದು ಕೂಡ ಬಿಜೆಪಿ ಮುಖಂಡರ ಉದ್ದೇಶವಾಗಿದೆ. ಜಾತಿ ಗಣತಿಯನ್ನು ಮೊದಲು ಘೋಷಿಸಿದ್ದು ಕರ್ನಾಟಕ ರಾಜ್ಯ. ಕರ್ನಾಟಕದ ಬಳಿಕ ಜಾತಿ ಗಣತಿ ಮಾಡಿದ ಹಲವು ರಾಜ್ಯಗಳು ಈಗಾಗಲೇ ವರದಿಗಳನ್ನು ಮಂಡಿಸಿವೆ. ಆದರೆ ರಾಜ್ಯದಲ್ಲಿ ಮಾತ್ರ ಈ ವರದಿ ಮಂಡನೆಗೆ ಸ್ವತಃ ಕಾಂಗ್ರೆಸ್ ಸರಕಾರವೇ ಮೀನಾ ಮೇಷ ಎಣಿಸುತ್ತಿದೆ.

ಮುಖ್ಯವಾಗಿ ಕಾಂಗ್ರೆಸ್ ಸರಕಾರ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ವರದಿ ಮಂಡನೆಗೆ ಪಕ್ಷದೊಳಗೆ ಸಹಮತ ಮೂಡಿಸುವಲ್ಲಿ ಯಶಸ್ವಿಯಾಗಬೇಕು. ಕಾಂಗ್ರೆಸ್‌ನೊಳಗಿರುವ ಕೆಲವು ಲಿಂಗಾಯತ ಮತ್ತು ಒಕ್ಕಲಿಗ ನಾಯಕರು ಈ ವರದಿಯ ಕುರಿತಂತೆ ಅಸಮಾಧಾನವನ್ನು ಹೊಂದಿದ್ದಾರೆ ಅಥವಾ ಬಿಜೆಪಿ ಮತ್ತು ಆರೆಸ್ಸೆಸ್ ಸಂಘಟನೆಗಳು ವರದಿಯ ಬಗ್ಗೆ ಹರಡಿರುವ ವದಂತಿಗಳನ್ನು ನಂಬಿ ವಿರೋಧಿಸುತ್ತಿದ್ದಾರೆ. ಕಾಂಗ್ರೆಸ್‌ನ ನಾಯಕರೇ ಈ ಹಿಂದೆ ಬಿಜೆಪಿ ನಾಯಕರ ಜೊತೆ ಸೇರಿ ಸಮೀಕ್ಷೆಯನ್ನು ವಿರೋಧಿಸಿದ್ದರು. ಈಗಿನ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಕೂಡ ಒಕ್ಕಲಿಗ ಮುಖಂಡರ ಒತ್ತಡಕ್ಕೆ ಮಣಿದು ವರದಿಯ ಬಗ್ಗೆ ಅಸಮ್ಮತಿಯನ್ನು ವ್ಯಕ್ತಪಡಿಸಿದ್ದರು. ನೂತನ ಸಮೀಕ್ಷೆಯ ಸಂದರ್ಭದಲ್ಲಿ ಕೆಲವು ತಾಂತ್ರಿಕ ಸಮಸ್ಯೆಗಳು ಎದುರಾಗಿದ್ದು ಸಮೀಕ್ಷೆಯ ಬಗ್ಗೆ ಹತ್ತು ಹಲವು ಆಕ್ಷೇಪಗಳು ಈಗಾಗಲೇ ಬಂದಿವೆ. ಆದರೆ ಸರಕಾರ ವರದಿಯನ್ನು ಅಧಿಕೃತವಾಗಿ ಸ್ವೀಕರಿಸಿದ ಮೇಲೆ ಅದನ್ನು ಮಂಡಿಸಿ, ಅದನ್ನು ಚರ್ಚಿಸಬೇಕು. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಸಮೀಕ್ಷೆ ವರದಿಯ ಬಗ್ಗೆ ತಮ್ಮ ಮೌನವನ್ನು ಮುರಿಯಬೇಕು. ವಿರೋಧ ಪಕ್ಷಗಳು ಹಾಕುತ್ತಿರುವ ಸವಾಲನ್ನು ಸ್ವೀಕರಿಸಿ, ಸಮೀಕ್ಷೆಯನ್ನು ಮಂಡಿಸುವ ಧೈರ್ಯವನ್ನು ಪ್ರದರ್ಶಿಸಬೇಕು.

ಎಸ್‌ಐಆರ್‌ನಲ್ಲಿ ಹೆಸರಿಲ್ಲದೇ ಇದ್ದವರಿಗೆ ಸರಕಾರದ ಕಲ್ಯಾಣ ಯೋಜನೆಗಳು, ಗ್ಯಾರಂಟಿ ಯೋಜನೆಗಳನ್ನು ನೀಡಲಾಗುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ಬೆದರಿಕೆಯೊಡ್ಡಿದ್ದಾರೆ. ಎಸ್‌ಐಆರ್‌ಗೂ ಸರಕಾರದ ಕಲ್ಯಾಣ ಯೋಜನೆಗಳಿಗೂ ಏನು ಸಂಬಂಧ? ಈಗಾಗಲೇ ತಾಂತ್ರಿಕ ಕಾರಣಗಳಿಂದ ಲಕ್ಷಾಂತರ ಮಂದಿ ಅರ್ಹ ಮತದಾರರು ಎಸ್‌ಐಆರ್‌ನಿಂದ ಹೊರ ಬಿದ್ದಿದ್ದಾರೆ. ಇದರ ಅರಿವಿದ್ದೂ ಅವರು ಕಲ್ಯಾಣ ಯೋಜನೆಗಳ ಅನುಷ್ಠಾನಗಳಿಗೆ ಎಸ್‌ಐಆರ್‌ನಲ್ಲಿ ಹೆಸರಿರುವುದು ಕಡ್ಡಾಯ ಎಂದು ಅಭಿಪ್ರಾಯ ಪಟ್ಟಿದ್ದಾರೆ. ನಿಜಕ್ಕೂ ಸರಕಾರದ ಕಲ್ಯಾಣ ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಬೇಕಾದರೆ ಸಾಮಾಜಿಕ - ಶೈಕ್ಷಣಿಕ ಸಮೀಕ್ಷೆಯ ವರದಿ ಬಹಿರಂಗವಾಗಬೇಕು. ಸರಕಾರದ ಬಳಿ ಸಾಮಾಜಿಕ ಮತ್ತು ಶೈಕ್ಷಣಿಕ ದತ್ತಾಂಶವೇ ಇಲ್ಲದಿದ್ದರೆ ಬಜೆಟ್ ಕಾರ್ಯಕ್ರಮಗಳನ್ನು ಹೇಗೆ ಮಾಡಲು ಸಾಧ್ಯ? ಸೌಲಭ್ಯಗಳನ್ನು ಹೇಗೆ ಹಂಚಲು ಸಾಧ್ಯ? ಈ ಪ್ರಶ್ನೆಯನ್ನು ಸ್ವತಃ ವಿರೋಧ ಪಕ್ಷಗಳೇ ಕೇಳುತ್ತಿವೆ. ಯಾವ್ಯಾವ ಸಮುದಾಯಗಳು ಎಷ್ಟು ಜನಸಂಖ್ಯೆಯನ್ನು ಹೊಂದಿವೆ, ಅವುಗಳ ಸಾಮಾಜಿಕ ಶೈಕ್ಷಣಿಕ ಸ್ಥಿತಿಗತಿಗಳು ಹೇಗಿವೆ ಎನ್ನುವ ಮಾಹಿತಿಯ ಆಧಾರದಲ್ಲಿ ಸರಕಾರದ ಸೌಲಭ್ಯಗಳನ್ನು ನ್ಯಾಯಯುತವಾಗಿ ಹಂಚುವ ಕೆಲಸವಾಗಬೇಕೇ ಹೊರತು, ಎಸ್‌ಐಆರ್‌ನ್ನು ಮಾನದಂಡವಾಗಿಟ್ಟುಕೊಂಡು ಅಲ್ಲ. ಯಾಕೆಂದರೆ, ಈ ದೇಶದಲ್ಲಿ ಮತದಾರರ ಪಟ್ಟಿಯಿಂದ ಹೊರ ಬಿದ್ದ ಲಕ್ಷಾಂತರ ಅರ್ಹ ಮತದಾರರು ಸರಕಾರದ ಕಲ್ಯಾಣ ಯೋಜನೆಗಳ ಫಲಾನುಭವಿಗಳಾಗಿರುವ ಕೂಲಿ ಕಾರ್ಮಿಕರು, ದಲಿತರು, ಅಲ್ಪಸಂಖ್ಯಾತರು. ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯ ವರದಿಯು ಈ ವರ್ಗದ ಜನರ ಕುರಿತಂತೆ ಏನು ಹೇಳುತ್ತದೆ ಎನ್ನುವುದನ್ನು ಕೇಳುವುದಕ್ಕೆ ನಾಡು ಕಾತರದಿಂದ ಕಾಯುತ್ತಿದೆ. ಆದುದರಿಂದ ಸಮೀಕ್ಷೆಯ ವರದಿಯನ್ನು ಚರ್ಚಿಸುವುದಕ್ಕೆ ಸರಕಾರ ಇನ್ನಾದರೂ ಧೈರ್ಯ ತೋರಬೇಕು.


ಸರ್ಕಾರಿ ಶಾಲೆಗೆ ಮಕ್ಕಳಿಲ್ಲ: ದೇಶಾದ್ಯಂತ 86 ಲಕ್ಷ ದಾಖಲಾತಿ ಇಳಿಕೆ, ರಾಜ್ಯದಲ್ಲೂ ಖಾಸಗಿ ಶಾಲೆಗಳತ್ತ ಒಲವು

ರಾಷ್ಟ್ರೀಯ ಮಟ್ಟದ ಈ ಇಳಿಮುಖದ ಪ್ರವೃತ್ತಿಗೆ ನಮ್ಮ ಕರ್ನಾಟಕ ರಾಜ್ಯವೂ ಹೊರತಾಗಿಲ್ಲ. ರಾಜ್ಯದಲ್ಲಿ 2021-22 ರಲ್ಲಿ 76,450 ಇದ್ದ ಒಟ್ಟು ಶಾಲೆಗಳ ಸಂಖ್ಯೆ, 2024-25 ರ ಹೊತ್ತಿಗೆ 74,859 ಕ್ಕೆ ಇಳಿಕೆಯಾಗಿದೆ. ಅದೇ ರೀತಿ ರಾಜ್ಯದ ಒಟ್ಟು ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣವು 1.24 ಕೋಟಿಯ ಗರಿಷ್ಠ ಹಂತದಿಂದ 1.18 ಕೋಟಿಗೆ ತಗ್ಗಿದೆ. ಪ್ರಸ್ತುತ ರಾಜ್ಯದಲ್ಲಿ 48,844 (ಶೇ 65.2) ಸರ್ಕಾರಿ ಶಾಲೆಗಳು ಹಾಗೂ 19,105 (ಶೇ 25.5) ಖಾಸಗಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಕರ್ನಾಟಕ ಸೇರಿದಂತೆ ದೇಶಾದ್ಯಂತ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗಳು ಕಂಡುಬರುತ್ತಿದ್ದು, ಸರ್ಕಾರಿ ಶಾಲೆಗಳ ದಾಖಲಾತಿ ಪ್ರಮಾಣ ಕುಸಿಯುತ್ತಿದೆ. ಕೇಂದ್ರ ಶಿಕ್ಷಣ ಸಚಿವಾಲಯ ಇತ್ತೀಚೆಗೆ ಬಿಡುಗಡೆ ಮಾಡಿರುವ 2025-26 ನೇ ಸಾಲಿನ ಸಮಗ್ರ ಯು-ಡೈಸ್ ಪ್ಲಸ್ (+) ವರದಿಯು ಈ ನೈಜ ಸ್ಥಿತಿಯನ್ನು ತೆರೆದಿಟ್ಟಿದೆ. ದೇಶಾದ್ಯಂತ ಪೋಷಕರು ಸರ್ಕಾರಿ ಶಾಲೆಗಳಿಗಿಂತ ಖಾಸಗಿ ಶಾಲೆಗಳತ್ತ ಮುಖ ಮಾಡುತ್ತಿರುವುದು ಈ ವರದಿಯಿಂದ ಸ್ಪಷ್ಟವಾಗಿದ್ದು, ದಾಖಲಾತಿ ಪ್ರವೃತ್ತಿಯಲ್ಲಿ ಭಾರಿ ಏರುಪೇರಾಗಿದೆ.

ರಾಷ್ಟ್ರೀಯ ಮಟ್ಟದ ಅಂಕಿ-ಅಂಶಗಳನ್ನು ಪರಿಶೀಲಿಸಿದರೆ, ಕಳೆದ ಎರಡು ವರ್ಷಗಳಲ್ಲಿ ಸರ್ಕಾರಿ ಶಾಲೆಗಳ ವಿದ್ಯಾರ್ಥಿ ದಾಖಲಾತಿಯಲ್ಲಿ ಬರೋಬ್ಬರಿ 86 ಲಕ್ಷದಷ್ಟು ಭಾರಿ ಇಳಿಮುಖವಾಗಿದೆ. 2023-24 ನೇ ಸಾಲಿನಲ್ಲಿ 12.75 ಕೋಟಿಯಷ್ಟಿದ್ದ ಸರ್ಕಾರಿ ಶಾಲಾ ದಾಖಲಾತಿಯು, 2025-26 ರ ವೇಳೆಗೆ 11.89 ಕೋಟಿಗೆ ಕುಸಿದಿದೆ. ಇದಕ್ಕೆ ವ್ಯತಿರಿಕ್ತವಾಗಿ, ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ದಾಖಲಾತಿ ಪ್ರಮಾಣವು 9 ಕೋಟಿಯಿಂದ 9.89 ಕೋಟಿಗೆ ಏರಿಕೆಯಾಗುವ ಮೂಲಕ 88 ಲಕ್ಷಕ್ಕೂ ಅಧಿಕ ಹೆಚ್ಚಳವನ್ನು ದಾಖಲಿಸಿದೆ. ಜನನ ಪ್ರಮಾಣದಲ್ಲಿನ ಇಳಿಕೆ ಮತ್ತು ಖಾಸಗಿ ಶಾಲೆಗಳ ಮೇಲಿನ ವ್ಯಾಮೋಹ ಇದಕ್ಕೆ ಮುಖ್ಯ ಕಾರಣ ಎನ್ನಲಾಗಿದೆ.

ದಾಖಲಾತಿ ಕುಸಿತದ ನಡುವೆಯೂ ರಾಷ್ಟ್ರ ಮಟ್ಟದಲ್ಲಿ ಕೆಲವು ಆಶಾದಾಯಕ ಸುಧಾರಣೆಗಳು ಗೋಚರಿಸಿವೆ. ದೇಶಾದ್ಯಂತ ಒಂದೂ ಮಗುವಿಲ್ಲದ (ಶೂನ್ಯ ದಾಖಲಾತಿ) ಶಾಲೆಗಳ ಸಂಖ್ಯೆ 7,993 ರಿಂದ 5,663 ಕ್ಕೆ ಇಳಿಯುವ ಮೂಲಕ ಶೇಕಡಾ 29 ರಷ್ಟು ಕುಸಿತ ಕಂಡಿದೆ. ಇದರೊಂದಿಗೆ ಏಕ-ಶಿಕ್ಷಕರಿರುವ ಶಾಲೆಗಳ ಪ್ರಮಾಣ ಶೇಕಡಾ 3 ರಷ್ಟು ತಗ್ಗಿದೆ. ಇನ್ನು ದೇಶದ ಒಟ್ಟು ಶಿಕ್ಷಕರ ಸಂಖ್ಯೆ 1 ಕೋಟಿ ಗಡಿಯನ್ನು ದಾಟಿದ್ದು, ಇದರಲ್ಲಿ ಮಹಿಳಾ ಶಿಕ್ಷಕಿಯರ ಪಾಲು ಶೇಕಡಾ 54.9 ರ'ಷ್ಟಿ'ರ'ುವ'ುದ'ು ಶೈಕ್ಷಣಿಕ ರಂಗದ ಧ'ನಾತ್ಮ'ಕ' ಬೆಳವಣಿಗೆಯಾಗಿದೆ.



ರಾಷ್ಟ್ರೀಯ ಮಟ್ಟದ ಈ ಇಳಿವ'ುಖದ' ಪ್ರವೃತ್ತಿಗೆ ನಮ್ಮ ಕರ್ನಾಟಕ ರಾಜ್ಯವೂ ಹೊರ'ತಾಗಿಲ್ಲ. ರಾಜ್ಯದ'ಲ್ಲಿ 2021-22 ರಲ್ಲಿ 76,450 ಇದ್ದ ಒಟ್ಟು ಶಾಲೆಗಳ ಸಂಖ್ಯೆ, 2024-25 ರ ಹೊತ್ತಿಗೆ 74,859 ಕ್ಕೆ ಇಳಿಕೆಯಾಗಿದೆ. ಅದೇ ರೀತಿ ರಾಜ್ಯದ ಒಟ್ಟು ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣವು 1.24 ಕೋಟಿಯ ಗರಿಷ್ಠ ಹಂತದಿಂದ 1.18 ಕೋಟಿಗೆ ತಗ್ಗಿದೆ. ಪ್ರಸ್ತುತ ರಾಜ್ಯದಲ್ಲಿ 48,844 (ಶೇ 65.2) ಸರ್ಕಾರಿ ಶಾಲೆಗಳು ಹಾಗೂ 19,105 (ಶೇ 25.5) ಖಾಸಗಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಇದೇ ವೇಳೆ ಇತ್ತೀಚಿನ ಯು-ಡೈಸ್ ದತ್ತಾಂಶಗಳ ಆಧಾರದ ಮೇಲೆ ಪ್ರಕಟವಾದ ವರದಿಗಳ ಪ್ರಕಾರ, ಕರ್ನಾಟಕದಲ್ಲಿ ಒಂದು ವಿಶಿಷ್ಟ ಹಾಗೂ ಆಸಕ್ತಿಕರ ಬೆಳವಣಿಗೆ ಕಂಡುಬಂದಿದೆ. ರಾಜ್ಯದ ಶಾಲೆಗಳಲ್ಲಿ ವಿದ್ಯಾರ್ಥಿಗಳ ಒಟ್ಟು ದಾಖಲಾತಿ ಪ್ರಮಾಣ ವರ್ಷದಿಂದ ವರ್ಷಕ್ಕೆ ಗಣನೀಯವಾಗಿ ಇಳಿಮುಖವಾಗುತ್ತಿದ್ದರೂ, ಲಭ್ಯವಿರುವ ಶಿಕ್ಷಕರ ಒಟ್ಟು ಸಂಖ್ಯೆಯಲ್ಲಿ ಮಾತ್ರ ನಿರಂತರ ಏರಿಕೆ ದಾಖಲಾಗಿದೆ. ಅಂದರೆ, ವಿದ್ಯಾರ್ಥಿಗಳ ಸಂಖ್ಯೆ ಕುಸಿಯುತ್ತಿದ್ದರೂ ಶಿಕ್ಷಕರ ನೇಮಕಾತಿ ಮತ್ತು ಲಭ್ಯತೆ ಹೆಚ್ಚಿರುವುದು ರಾಜ್ಯದ ಶೈಕ್ಷಣಿಕ ವಲಯದಲ್ಲಿ ಹೊಸ ಚರ್ಚೆಯನ್ನು ಹುಟ್ಟುಹಾಕಿದೆ.

ರಾಜ್ಯದಲ್ಲಿ ಶೂನ್ಯ ದಾಖಲಾತಿ ಹೊಂದಿರುವ ಶಾಲೆಗಳನ್ನು ತರ್ಕಬದ್ಧಗೊಳಿಸುವ ಅಥವಾ ಸಮೀಪದ ಶಾಲೆಗಳೊಂದಿಗೆ ವಿಲೀನಗೊಳಿಸುವ ಸರ್ಕಾರದ ಕ್ರಮಗಳು ಉತ್ತಮ ಫಲಿತಾಂಶ ನೀಡಿದೆ. ತನ್ಮೂಲಕ 2023-24 ನೇ ಸಾಲಿನಲ್ಲಿ 1,078 ರಷ್ಟಿದ್ದ ಶೂನ್ಯ ದಾಖಲಾತಿ ಶಾಲೆಗಳ ಸಂಖ್ಯೆ, ಕೇವಲ ಒಂದೇ ವರ್ಷದಲ್ಲಿ 270 ಕ್ಕೆ ತೀವ್ರವಾಗಿ ಇಳಿದಿದೆ. ಜೊತೆಗೆ, ಪ್ರಾಥಮಿಕ ಹಾಗೂ ಮಾಧ್ಯಮಿಕ ಹಂತದ ಒಟ್ಟು ಪ್ರವೇಶಾತಿ ಅನುಪಾತದಲ್ಲಿ () ಕರ್ನಾಟಕವು ರಾಷ್ಟ್ರೀಯ ಸರಾಸರಿಗಿಂತ ಉತ್ತಮ ಸ್ಥಾನದಲ್ಲಿದ್ದು, ಮೂಲಸೌಕರ್ಯಗಳೂ ಸುಧಾರಿಸುತ್ತಿವೆ.

ಆದಾಗ್ಯೂ, ಕರ್ನಾಟಕದ ಶಿಕ್ಷಣ ವ್ಯವಸ್ಥೆಯಲ್ಲಿ ಪ್ರೌಢಶಾಲಾ (ಮಾಧ್ಯಮಿಕ) ಹಂತದ ಮಕ್ಕಳ ಡ್ರಾಪ್‌ಔಟ್ (ಶಾಲೆ ಬಿಡುವ) ದರ ತೀವ್ರ ಕಳವಳಕಾರಿಯಾಗಿದೆ. ರಾಷ್ಟ್ರೀಯ ಮಟ್ಟದ ಸರಾಸರಿ ಡ್ರಾಪ್‌ಔಟ್ ದರ ಶೇಕಡಾ 11.5 ರಷ್ಟಿದ್ದರೆ, ಕರ್ನಾಟಕದಲ್ಲಿ ಇದು ಶೇಕಡಾ 18.3 ರಷ್ಟು ದಾಖಲಾಗಿದೆ. ಸರ್ಕಾರಿ ಶಾಲೆಗಳಿಂದ ಖಾಸಗಿ ಶಾಲೆಗಳತ್ತ ಪೋಷಕರು ಮತ್ತು ವಿದ್ಯಾರ್ಥಿಗಳು ವಲಸೆ ಹೋಗುವುದನ್ನು ತಡೆಯುವುದು ಹಾಗೂ ಮಾಧ್ಯಮಿಕ ಹಂತದಲ್ಲಿ ಮಕ್ಕಳನ್ನು ಶಾಲೆಯಲ್ಲೇ ಉಳಿಸಿಕೊಳ್ಳುವುದು ರಾಜ್ಯ ಸರ್ಕಾರದ ಮುಂದಿರುವ ಬಹುದೊಡ್ಡ ಸವಾಲಾಗಿದೆ.

ಯುದ್ಧ ಕುಂಡದಲ್ಲಿ ಮಧ್ಯಪ್ರಾಚ್ಯ: ಟ್ರಂಪ್ ಹುಚ್ಚಾಟದಿಂದ ಸಂಧಾನಕ್ಕೂ ಅಗ್ನಿಪರೀಕ್ಷೆ!

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದರ್ಪ ಮತ್ತು ಅವಿವೇಕದ ನಿರ್ಧಾರಗಳು ಮಧ್ಯಪ್ರಾಚ್ಯವನ್ನು ಭೀಕರ ಯುದ್ಧದ ಕುಂಡಕ್ಕೆ ತಳ್ಳುತ್ತಿವೆ. ನಾನೇ ಎಲ್ಲವನ್ನೂ ಸರಿಪಡಿಸುತ್ತೇನೆ ಎಂಬ ಅವರ ಅಹಂಕಾರಿ ಮಾತುಗಳು, ಇಂದು ಲಕ್ಷಾಂತರ ಜನರ ಬದುಕನ್ನು ಅತಂತ್ರಗೊಳಿಸಿವೆ. ಕೇವಲ ಮೂರು ವಾರಗಳ ಹಿಂದೆ ಮಾಡಿಕೊಂಡಿದ್ದ ಕದನ ವಿರಾಮ ಒಪ್ಪಂದವನ್ನು ಕ್ಷಣಮಾತ್ರದಲ್ಲಿ ಚಿಂದಿ ಮಾಡಬಲ್ಲ ಟ್ರಂಪ್ ತಿಕ್ಕಲುತನಕ್ಕೆ ಏನನ್ನಬೇಕೋ!

ಕಳೆದ ಜೂನ್ 17ರಂದು ಮಾಡಿಕೊಳ್ಳಲಾಗಿದ್ದ ತಾತ್ಕಾಲಿಕ ಕದನ ವಿರಾಮ/ಶಾಂತಿ ಒಪ್ಪಂದ ಕೇವಲ ಮೂರೇ ವಾರಗಳಲ್ಲಿ ಭಗ್ನಗೊಂಡಿದ್ದು, ಅಮೆರಿಕ ಮತ್ತು ಇರಾನ್ ನೇರ ಯುದ್ಧದ ಅಖಾಡಕ್ಕೆ ಇಳಿದಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿಲುವುಗಳು ಮತ್ತು ಇರಾನ್‌ನ ಸವಾಲುಗಳು ಸೇರಿ ಮಧ್ಯಪ್ರಾಚ್ಯದ ಶಾಂತಿ ಪ್ರಕ್ರಿಯೆಯನ್ನು ಅಗ್ನಿಪರೀಕ್ಷೆಗೊಡ್ಡಿದ್ದು, ಇಡೀ ಮಧ್ಯಪ್ರಾಚ್ಯವನ್ನು ಉಸಿರುಗಟ್ಟುವಂತೆ ಮಾಡಿದೆ.



ಟ್ರಂಪ್ ಅವರ ರಾಜಕೀಯ ಶೈಲಿಯೇ ಅನಿರೀಕ್ಷಿತ ಮತ್ತು ಆಕ್ರಮಣಕಾರಿ. ನ್ಯಾಟೋ ಶೃಂಗಸಭೆಯಿಂದ ಮರಳಿದ ಬೆನ್ನಲ್ಲೇ ಅವರು ತೆಗೆದುಕೊಂಡ ನಿರ್ಧಾರಗಳು ಯುದ್ಧದ ಕಾವು ಹೆಚ್ಚಿಸಿವೆ. ''ಯಾವುದೇ ಕ್ರಮ ಕೈಗೊಳ್ಳಬೇಕಾದರೂ ಅದು ವೇಗವಾಗಿ ನಡೆಯಬೇಕು, ಕೆಲಸವನ್ನು ನಾವು ಪೂರ್ಣಗೊಳಿಸುತ್ತೇವೆ'' ಎಂಬ ಟ್ರಂಪ್ ಅವರ ಹೇಳಿಕೆ, ಅಮೆರಿಕದ ಸೇನೆಯ ಮೇಲಿನ ಅವರ ವಿಶ್ವಾಸವನ್ನು ಮತ್ತು ಇರಾನ್ ವಿರುದ್ಧದ ಯುದ್ಧದ ತೀವ್ರತೆಯನ್ನು ತೋರಿಸುತ್ತದೆ. ಹಾರ್ಮುಜ್ ಜಲಸಂಧಿಯಲ್ಲಿ ವ್ಯಾಪಾರ ಹಡಗುಗಳ ಮೇಲೆ ಇರಾನ್ ದಾಳಿ ನಡೆಸಿದೆ ಆರೋಪಿಸಿ, ಅದನ್ನು ಒಪ್ಪಂದದ ಉಲ್ಲಂಘನೆ ಎಂದು ಘೋಷಿಸಿ, ತಕ್ಷಣವೇ ವೈಮಾನಿಕ ದಾಳಿಗೆ ಟ್ರಂಪ್ ಆದೇಶಿಸಿದ್ದಾರೆ. ಆದರೆ ಈ ದಾಳಿಗಳು ಕೇವಲ ಸೇನಾ ನೆಲೆಗಳಿಗಷ್ಟೇ ಸೀಮಿತವಾಗಿಲ್ಲ; ಇರಾನ್‌ನ ವಿದ್ಯುತ್ ಸ್ಥಾವರಗಳು, ನೀರು ಶುದ್ಧೀಕರಣ ಘಟಕಗಳು ಮತ್ತು ಪ್ರಮುಖ ತೈಲ ರಫ್ತು ಕೇಂದ್ರವಾದ ಖಾರ್ಗ್ ದ್ವೀಪವನ್ನೂ ಗುರಿಯಾಗಿಸಿದ್ದಾರೆ.

ಕದನ ವಿರಾಮ ಮುರಿದು ಬಿದ್ದಿದೆ ಎಂದು ಟ್ರಂಪ್ ಹೇಳಿಕೆ ನೀಡಿದ ಬೆನ್ನಲ್ಲೇ ಇರಾನ್‌ನ 90 ಸ್ಥಳಗಳನ್ನು ಗುರಿಯಾಗಿಸಿ ಅಮೆರಿಕ ದಾಳಿ ಮಾಡಿದೆ. ಇರಾನ್‌ನ ಬಂದರು ನಗರಗಳಾದ ಬುಶೆಹ್ರ್, ಬಂದರ್ ಅಬ್ಬಾಸ್, ಸಿರಿಕ್‌ನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದೆ. ಈ ಬಗ್ಗೆ ಅಮೆರಿಕದ ಮಾಹಿತಿ ಬಿಡುಗಡೆ ಮಾಡಿದೆ. ಅದರಂತೆ ಅಮೆರಿಕ () ಪಡೆಗಳು ಇರಾನ್‌ನ ಸುಮಾರು 90 ಮಿಲಿಟರಿ ನೆಲೆಗಳ ಮೇಲೆ ದಾಳಿ ನಡೆಸಿವೆ. ವಾಯು ರಕ್ಷಣಾ ವ್ಯವಸ್ಥೆಗಳು, ಕರಾವಳಿ ಕಣ್ಗಾವಲು ವ್ಯವಸ್ಥೆಗಳು, ಕ್ಷಿಪಣಿ ಹಾಗೂ ಡ್ರೋನ್ ಸಂಗ್ರಹಣಾ ತಾಣಗಳು, ನೌಕಾಪಡೆಯ ಸಾಮರ್ಥ್ಯಗಳಿಗೆ ಸಂಬಂಧಿಸಿದ ಸೌಲಭ್ಯಗಳು ಮತ್ತು ಇರಾನ್‌ನ ಕರಾವಳಿಯುದ್ದಕ್ಕೂ ಇರುವ ಮಿಲಿಟರಿ ಲಾಜಿಸ್ಟಿಕ್ಸ್ ಮೂಲಸೌಕರ್ಯಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ. ಅಮೆರಿಕ ಸೇನೆ ಎರಡು ದಿನಗಳಿಂದ ನಡೆಸುತ್ತಿರುವ ಭಾರೀ ವೈಮಾನಿಕ ದಾಳಿಯಲ್ಲಿ 14 ಮಂದಿ ಮೃತಪಟ್ಟಿದ್ದು, 78ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ಇರಾನ್‌ನ ಆರೋಗ್ಯ ಸಚಿವಾಲಯದ ವಕ್ತಾರ ಮಾಹಿತಿ ಹಂಚಿಕೊಂಡಿದ್ದಾರೆ.

ಸಂಘರ್ಷದ ಬಗ್ಗೆ ಮಾತನಾಡಿರುವ ಟ್ರಂಪ್, ಪ್ರತಿ ಬಾರಿ ದಾಳಿ ಮಾಡಿದಾಗಲೂ ನಾವು 20 ಬಾರಿ ಬಲವಾಗಿ ಹೊಡೆಯುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ನ್ಯಾಟೋ ಶೃಂಗಸಭೆಯಲ್ಲಿ ಮಾತನಾಡುತ್ತಿದ್ದಾಗ ಇರಾನ್ ಅನ್ನು ಇಸ್ಲಾಮಿಕ್ ಸ್ಟೇಟ್ ಆಫ್ ಜಪಾನ್ ಎಂದು ಮುಜುಗರಕ್ಕೀಡಾಗಿದ್ದಾರೆ. ಇರಾನ್ ಒಪ್ಪಂದ ಮಾಡಿಕೊಳ್ಳಲು ಹವಣಿಸುತ್ತಿದೆ. ಸ್ವಲ್ಪ ಸಮಯದ ಹಿಂದಷ್ಟೇ ಕರೆ ಮಾಡಿದ್ದರು. ಅವರು ಒಪ್ಪಂದ ಮಾಡಿಕೊಳ್ಳಲು ಅರ್ಹರೋ ಅಲ್ಲವೋ ಗೊತ್ತಿಲ್ಲ. ಭವಿಷ್ಯದ ಒಪ್ಪಂದ ಗೌರವಿಸುತ್ತಾರೋ ಇಲ್ಲವೋ ಅದೂ ಗೊತ್ತಿಲ್ಲ. ಹೇಳಬೇಕು ಎಂದರೆ ಅವರು ಹುಚ್ಚರು ಎಂದು ಟೀಕಿಸಿದ್ದಾರೆ.

ಟ್ರಂಪ್ ಹೇಳಿಕೆಗೆ ಸಿಡಿಮಿಡಿಗೊಂಡ ಇರಾನ್, ಕದನ ವಿರಾಮಕ್ಕೆ ಇರಾನ್ ದೂರವಾಣಿ ಕರೆ ಮಾಡಿತ್ತು ಎಂಬ ಹೇಳಿಕೆಯನ್ನು ತಳ್ಳಿ ಹಾಕಿರುವ ಇರಾನ್, ಅಮೆರಿಕದ ಮೇಲೆ ನಾವು ಎಂದಿಗೂ ನಂಬಿಕೆ ಇರಿಸಿಲ್ಲ ಎಂದು ಹೇಳಿದೆ. ಈ ಬಗ್ಗೆ ಮಾತನಾಡಿರುವ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ, ಅಮೆರಿಕದ ಮೇಲೆ ನಾವು ಎಂದಿಗೂ ನಂಬಿಕೆ ಇರಿಸಿಲ್ಲ ಭರವಸೆಗೆ ಭರವಸೆ ಎನ್ನುವ ತತ್ವದಲ್ಲಿ ಒಪ್ಪಂದವಾಗಿತ್ತು. ಏಕಪಕ್ಷೀಯವಾಗಿ ದಾಳಿ ಮಾಡುವ ಮೂಲಕ ಅಮೆರಿಕವೇ ಒಪ್ಪಂದ ಉಲ್ಲಂಘಿಸಿದೆ. ಅಲ್ಲಾನು ದ್ರೋಹ ಮಾಡುವವರನ್ನು ಇಷ್ಟಪಡುವುದಿಲ್ಲ ಇರಾನ್ ತನ್ನ ಸಾರ್ವಭೌಮತ್ವವನ್ನು ಉಳಿಸಿಕೊಳ್ಳಲು ಶಕ್ತವಾಗಿದೆ ತಿರುಗೇಟು ನೀಡಿದ್ದಾರೆ.

ಕದನ ವಿರಾಮ ಉಲ್ಲಂಘಿಸಿದ್ದು ಇರಾನ್ ಎಂದು ಅಮೆರಿಕ ಆರೋಪಿಸುತ್ತಿದೆ. ಆದರೆ ಬ್ರಿಟಿಷ್ ಕಡಲ ಭದ್ರತಾ ಸಂಸ್ಥೆಗಳ ಪ್ರಕಾರ, ಹಾರ್ಮುಜ್ ಜಲಸಂಧಿಯನ್ನು ಸಾಗಿಸುತ್ತಿದ್ದ ಮೂರು ವ್ಯಾಪಾರಿ ಹಡಗುಗಳ ಮೇಲೆ ದಾಳಿ ಮಾಡಲಾಗಿದೆ. ಒಂದು ಟ್ಯಾಂಕರ್ ಮೇಲೆ ಸ್ಫೋಟಕ ಡಿಕ್ಕಿ ಹೊಡೆದ ನಂತರ ಬೆಂಕಿ ಹೊತ್ತಿಕೊಂಡಿತು. ಈ ಘಟನೆಗೆ ಅಮೆರಿಕ ನೇರವಾಗಿ ಇರಾನ್ ಅನ್ನು ದೂಷಿಸಿದೆ, ಇದನ್ನು ಕದನ ವಿರಾಮ ಉಲ್ಲಂಘನೆ ಎಂದು ಕರೆದಿದೆ. ಆದಾಗ್ಯೂ, ಇರಾನ್ ಈ ಆರೋಪಗಳನ್ನು ನಿರಾಕರಿಸಿದೆ. ಒಪ್ಪಂದವನ್ನು ಉಲ್ಲಂಘಿಸಿದ ಮೊದಲ ವ್ಯಕ್ತಿ ಅಮೆರಿಕ ಎಂದು ಹೇಳಿಕೊಂಡಿದೆ. ಒಪ್ಪಂದದ ಕೆಲವೇ ವಾರಗಳ ನಂತರ ಈ ಘಟನೆ ಸಂಭವಿಸಿದೆ, ಇದು ಎರಡು ದೇಶಗಳ ನಡುವೆ 60 ದಿನಗಳ ಮಾತುಕತೆಗೆ ಒಂದು ಚೌಕಟ್ಟನ್ನು ಸ್ಥಾಪಿಸಿದೆ. ಟ್ರಂಪ್ ಯುದ್ಧ ದಾಹಿ ಎನ್ನುವ ಆರೋಪಕ್ಕೆ ಈ ಸನ್ನಿವೇಶ ಉತ್ತಮ ಉದಾಹರಣೆ ಎನ್ನುತ್ತಿದ್ದಾರೆ ಜಾಗತಿಕ ವಿಶ್ಲೇಷಕರು.

ಈ ಸರಣಿ ದಾಳಿಗಳು ಅಮೆರಿಕ ಮತ್ತು ಇರಾನ್ ನಡುವಿನ ವಿಶ್ವಾಸವೃದ್ಧಿಗೆ ಮಾರಕವಾಗಿ ಪರಿಣಮಿಸಿವೆ. ಪರಮಾಣು ಕಾರ್ಯಕ್ರಮ, ಆರ್ಥಿಕ ನಿರ್ಬಂಧಗಳು ಮತ್ತು ಪ್ರಾದೇಶಿಕ ಭದ್ರತೆಯಂತಹ ಜಟಿಲ ವಿಷಯಗಳ ಕುರಿತು ನಡೆಯುತ್ತಿದ್ದ ಸೂಕ್ಷ್ಮ ಮಾತುಕತೆಗಳು, ಇದೀಗ ಪರಸ್ಪರ ಆರೋಪ-ಪ್ರತ್ಯಾರೋಪಗಳ ನಡುವೆ ಹಳಿತಪ್ಪಿವೆ. ವ್ಯಾಪಾರಿ ಹಡಗುಗಳ ಮೇಲಿನ ದಾಳಿಯನ್ನು ಅಮೆರಿಕವು ಕೆಂಪು ರೇಖೆಯನ್ನು ದಾಟಿದ ಕೃತ್ಯ ಎಂದು ಬಣ್ಣಿಸಿದರೆ, ಅಮೆರಿಕದ ವೈಮಾನಿಕ ದಾಳಿ ಮತ್ತು ತೈಲ ರಫ್ತಿನ ಮೇಲಿನ ನಿರ್ಬಂಧಗಳನ್ನು ಒಪ್ಪಂದದ ಉಲ್ಲಂಘನೆ ಎಂದು ಇರಾನ್ ಪ್ರತಿಪಾದಿಸುತ್ತಿದೆ.

ಸಮುದ್ರ ಮಾರ್ಗಗಳಲ್ಲಿ ಹಿಂಸಾಚಾರ ಹೆಚ್ಚಿದಷ್ಟು, ಮಾತುಕತೆಯ ಮೇಜಿನ ಬಳಿ ರಿಯಾಯಿತಿ ನೀಡುವುದು ಎರಡೂ ದೇಶಗಳಿಗೆ ರಾಜಕೀಯವಾಗಿ ಅಸಾಧ್ಯವಾಗುತ್ತದೆ. ತಂತಮ್ಮ ದೇಶಗಳಲ್ಲಿ ನಾಯಕರು ದುರ್ಬಲರಾಗಿ ಕಾಣಿಸಿಕೊಳ್ಳಲು ಬಯಸದ ಕಾರಣ, ಯಾವುದೇ ರಾಜಿ ಮಾಡಿಕೊಳ್ಳಲು ಸಿದ್ಧರಿರುವುದಿಲ್ಲ. ಇಂತಹ ಹಠಮಾರಿ ಧೋರಣೆಗಳು ಸಂಧಾನ ಪ್ರಕ್ರಿಯೆಯನ್ನು ಸ್ಥಗಿತಗೊಳಿಸುವುದರ ಜೊತೆಗೆ ಸೌಹಾರ್ದಯುತ ಪರಿಹಾರದ ದಾರಿಯನ್ನೂ ಸಂಪೂರ್ಣವಾಗಿ ಮುಚ್ಚಿ, ಸಂಘರ್ಷವನ್ನು ಮತ್ತಷ್ಟು ಭೀಕರಗೊಳಿಸಿವೆ ಎನ್ನುವುದು ವಿಶ್ಲೇಷಕರ ಅಭಿಪ್ರಾಯ.

ಟ್ರಂಪ್ ಹುಚ್ಚಾಟದ ಹೇಳಿಕೆ ನೀಡ'ುವ'ುದ'ು ಹೊಸ'ತೇನ'ಲ್ಲ. ಜಗತ್ತಿನ ಇತರೆ ದ'ೇಶ'ಗ'ಳ' ನಾಯಕರು ತನ್ನ ಆಣತಿಯಂತೆಯೇ ನ'ಡೆಯಬೇಕ'ು ಎಂಬ ಮೊಂಡುತನ ಟ್ರಂಪ್ ಅವರದ್ದು. ಟ್ರಂಪ್ ಅಬ್ರಹಾಂ ಒಪ್'ಂದ'ದ' ರೂವಾರಿ ತಾನೇ ಎಂದ'ು ಬೀಗುವವರು. ಅವ'ೆರಿಕ'ದ' 2020ರ ಚುನಾವಣೆಯಲ್ಲಿ ತಾವೇ ಗೆದ್ದಿದ್ದಾಗಿ ಸುಳ್ಳು ವಾದ ಮಂಡಿಸುತ್ತಿದ್ದವರು. ಈ ವೇಳೆಯಲ್ಲೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಜೋ ಬೈಡನ್ ಅವರ ಗೆಲುವನ್ನು ಅಭಿನಂದಿಸಿದ್ದಕ್ಕೆ ಟ್ರಂಪ್ ತೀವ್ರವಾಗಿ ಕೆರಳಿದ್ದರು. ನೆತನ್ಯಾಹು ವಿರುದ್ಧ ಬಹಿರಂಗವಾಗಿ ಅಶ್ಲೀಲ, ವೈಯಕ್ತಿಕ ನಿಂದನೆ ಮಾಡಿದ್ದರು. ಬೈಡನ್‌ನನ್ನು ಅಭಿನಂದಿಸಿದ ನೆತನ್ಯಾಹುಗೆ ''ನಿಷ್ಠೆ ಎಂಬುದೇ ಇಲ್ಲ'' ಎಂದು ಕಿಡಿಕಾರಿದ್ದರು. ಅಂದರೆ ಟ್ರಂಪ್‌ಗೆ ಮಧ್ಯಪ್ರಾಚ್ಯದ ದೀರ್ಘಾವಧಿ ಶಾಂತಿಗಿಂತಲೂ, ಜಾಗತಿಕ ನಾಯಕರು ತಮಗೆ ನಿಷ್ಠರಾಗಿರುವುದು ಮುಖ್ಯ!

ಹೀಗೆ ತಾನು ಹೇಳಿದ್ದೇ ಅಂತಿಮ. ಅಮೆರಿಕ ಫಸ್ಟ್, ಉಳಿದದ್ದು ನೆಕ್ಸ್ಟ್ ಎನ್ನುವ ಟ್ರಂಪ್ ಅವರ ವಿದೇಶಾಂಗ ನೀತಿಯು ಬಹುಪಕ್ಷೀಯ ಒಪ್ಪಂದಗಳಿಗಿಂತ ತನ್ನದೇ ಆದ ಷರತ್ತುಗಳನ್ನು ಮುಂದಿಡುವಂತದ್ದು. ಕದನ ವಿರಾಮ ಒಪ್ಪಂದದ ನಡುವೆ ಈ ಮಿತ್ರರಾಷ್ಟ್ರಗಳ ನಿಲುವನ್ನೂ ಕಡೆಗಣಿಸಿ ತಮ್ಮದೇ ನಿಲುವನ್ನು ತಳೆಯುವುದು ಟ್ರಂಪ್ ಸಂಘರ್ಷಕ್ಕೆ ನೀಡುವ ಪ್ರಚೋದನೆ. ಅಷ್ಟು ಮಾತ್ರವಲ್ಲದೆ ಮಾತುಕತೆಯ ನಡುವೆಯೇ ಟ್ರುತ್ ಸಾಮಾಜಿಕ ಜಾಲತಾಣದಲ್ಲಿ ಟ್ರಂಪ್ ಮಾಡುವ ವಿತಂಡ ವಾದದ ಪೋಸ್ಟ್‌ಗಳು ಅವರ ಹಠಮಾರಿತನಕ್ಕೆ, ಅಸಂಬದ್ಧತೆಗೆ ಸಾಕ್ಷಿ.

ಟ್ರಂಪ್ ಅವರ ಆಕ್ರಮಣಕಾರಿ ವಿದೇಶಾಂಗ ನೀತಿ ಮಧ್ಯಪ್ರಾಚ್ಯದಲ್ಲಿ ಮಾನವೀಯ ಬಿಕ್ಕಟ್ಟನ್ನ ಸೃಷ್ಟಿಸಿದೆ. ಅದರ ಪರಿಣಾಮ ಭಾರತವನ್ನೂ ಸೇರಿದಂತೆ ಜಗತ್ತಿನ ರಾಷ್ಟ್ರಗಳ ಮೇಲಾಗುತ್ತಿದೆ. ರಾಜಕೀಯ ಅಹಂಕಾರವನ್ನು ದೇಶದ ಹಿತಾಸಕ್ತಿಯ ಮುಂದೆ ಇರಿಸುವ ಟ್ರಂಪ್ ಶೈಲಿ, ಸಂಧಾನದ ಎಲ್ಲಾ ದಾರಿಗಳನ್ನು ಮುಚ್ಚಿ ಜಗತ್ತನ್ನು ಮತ್ತೊಂದು ಮಹಾಯುದ್ಧದ ಅಂಚಿಗೆ ತಳ್ಳಿದೆ. ಇಂತಹ ಪರಿಸ್ಥಿತಿಯಲ್ಲಿ, ಶಾಂತಿ ಸಂಧಾನದ ಎಲ್ಲಾ ಸಾಧ್ಯತೆಯ ಬಾಗಿಲುಗಳು ಸಂಪೂರ್ಣವಾಗಿ ಮುಚ್ಚಿಹೋದರೆ, ಅದರ ಪರಿಣಾಮಗಳನ್ನು ಇಡೀ ಜಗತ್ತು ಭರಿಸಬೇಕಾಗುತ್ತದೆ. ಈ ಸಂಘರ್ಷದ ಹಾದಿಯಲ್ಲಿ ಗೆಲುವು ಯಾರದ್ದೇ ಆಗಿರಲಿ, ಅಂತಿಮವಾಗಿ ಸೋಲುವುದು ಮಾತ್ರ ಮಾನವೀಯತೆ ಮತ್ತು ಶಾಂತಿ.

ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ರಂಗೋಲಿಯಲ್ಲಿ ಅರಳಿದ ಮತದಾರರ ಜಾಗೃತಿ ಸಂದೇಶಗಳು



ಸಿರುಗುಪ್ಪ - ತಾಲೂಕು ಪಂಚಾಯಿತಿ ಆವರಣದಲ್ಲಿ ಬುಧವಾರ ನಡೆದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಎಸ್‌ಐಆರ್ ಜಾಗೃತಿ ಅಂಗವಾಗಿ ಆಯೋಜಿಸಿದ್ದ ರಂಗೋಲಿ ಸ್ಪರ್ಧೆಯಲ್ಲಿ ಮಹಿಳೆಯರು ಮತದಾನ ಜಾಗೃತಿ ಸಂದೇಶಗಳನ್ನು ರಂಗೋಲಿಯಲ್ಲಿ ಮೂಡಿಸಿದರು

ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ಹಾಗೂ ಒಬ್ಬನೇ ಮತದಾರ ಹಲವು ಕ್ಷೇತ್ರಗಳಲ್ಲಿ ಹೆಸರು ನೋಂದಾಯಿಸುವುದನ್ನು ತಡೆಯುವುದೇ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆ)ರ್ ಅಭಿಯಾನದ ಮುಖ್ಯ ಉದ್ದೇಶ ಎಂದು ತಾ.ಪಂ. ಇಒ ಪವನ್ ಕುಮಾರ್ ಎಸ್. ದಂಡಪ್ಪನವರ್ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂ ಕು ಪಂಚಾಯಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬುಧವಾರ ಆಯೋಜಿಸಿದ್ದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆ)ರ್ ಅಂಗವಾಗಿ ನಡೆದ ರಂಗೋಲಿ ಸ್ಪರ್ಧೆ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು ಮತಗಟ್ಟೆ ಮಟ್ಟದ ಅಧಿಕಾರಿಗಳು ಬಿ ಎಲ್ ಓ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ನಮೂನೆಗಳನ್ನು ವಿತರಿಸಲಿದ್ದು ಸಾರ್ವಜನಿಕರು ಅವುಗಳನ್ನು ನಿಖರ ಮಾಹಿತಿಯೊಂದಿಗೆ ಭರ್ತಿ ಮಾಡಿ ಸಲ್ಲಿಸಬೇಕು ಎಂದು ಮನವಿ ಮಾಡಿದರು ಪರಿಷ್ಕರಣೆ ಕಾರ್ಯ ಜುಲೈ 29ರವರೆಗೆ ನಡೆಯಲಿದ್ದು, ನಂತರ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು. ರಂಗೋಲಿ ಸ್ಪರ್ಧೆಯಲ್ಲಿ ಸ್ವಸಹಾಯ ಸಂಘಗಳ ಮಹಿಳೆಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಉತ್ಸಾಹದಿಂದ ಪಾಲ್ಗೊಂಡಿದ್ದರು. ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಸಂದೇಶಗಳು ಲಾಂಛನಗಳು ಮತ್ತು ಮತದಾನದ ಮಹತ್ವ ಸಾರುವ ಕಲಾಕೃತಿಗಳು ರಂಗೋಲಿಯಲ್ಲಿ ಮೂಡಿ ಗಮನ ಸೆಳೆದವು ಕಾರ್ಯಕ್ರಮದಲ್ಲಿ ಸಿಡಿಪಿಓ ಪ್ರದೀಪ್ ಕುಮಾರ್ ಉಪಸ್ಥಿತರಿದ್ದರು

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR